# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 262 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 08–05–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 262 | Title- Code: KARKAN 28269 | Chitradurga | Date: 08-05-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಸಿಇಸಿಯಿಂದ ಕೆಎಂಇಆರ್‌ಸಿ ಕಾಮಗಾರಿ ಲೋಪವಾಗದಂತೆ ಅನುಷ್ಠಾಗೊಳಿಸಿ 2

ಮಕ್ಕಳಿಗೆ ನೀಡುವ ಲಸಿಕೆಗಳು ಎದೆ ಹಾಲನಷ್ಟೇ ಮಹತ್ವವಾಗಿದೆ: ಟಿಎಚ್‌ಓ 3

ಕರ್ನಾಟಕದಲ್ಲಿ ಕೆಲವು ಭಾಗಗಳಲ್ಲಿ ಭಾರಿ ಮಳೆ ಸಾಧ್ಯತೆ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಮದಕರಿನಾಯಕನ ರಾಜಬೀದಿಯಲ್ಲಿ ಸಂಭ್ರಮದಿಂದ ನೇರವೇರಿದ

# ಅಕ್ಕ ತಂಗಿ ಭೇಟಿ ಉತ್ಸವ

» ನಮ್ಮಜನ ಸಮಾಚಾರ

ಚಿತ್ರದುರ್ಗ: ಕೋಟೆನಾಡು ಚಿತ್ರದುರ್ಗದಲ್ಲಿ ಸಂಪ್ರದಾಯದಂತೆ ನಗರದ ರಾಜಬೀದಿ ದೊಡ್ಡಪೇಟೆಯಲ್ಲಿ ಮಂಗಳವಾರ ಶಕ್ತಿ ದೇವತೆಗಳಾದ ಅಕ್ಕ ಬರಗೇರಮ್ಮ ಮತ್ತು ತಂಗಿ ತಿಪ್ಪಿನಘಟ್ಟಮ್ಮ ದೇವಿಯರ "ಭೇಟಿ ಉತ್ಸವ" ಭಕ್ತರ ಸಾಗರದ ಮಧ್ಯೆ ನೆರವೇರಿತು.

ನಗರದ ಅಧಿದೇವತೆ ಏಕನಾಥೇಶ್ವರಿ ಭಾನುವಾರ ಮುಂಜಾನೆ ಮೇಲುದುರ್ಗದ ದೇವಸ್ಥಾನಕ್ಕೆ ತೆರಳಿತು. ಗಂಗಾ ಪೂಜೆ ನೆರವೇರಿಸಿ ಪೂಜೆ ಸಲ್ಲಿಸಿದ ಬಳಿಕ ಇತ್ತ ದೊಡ್ಡಪೇಟೆಯಲ್ಲಿ ಭೇಟಿ ಉತ್ಸವದ ಸಿದ್ಧತೆಗಳು ಪ್ರಾರಂಭವಾದವು. ಉತ್ಸವವನ್ನು ಕಣ್ತುಂಬಿಕೊಳ್ಳುವ ಭಕ್ತರಿಗೆ ಯಾವುದೇ ಸಮಸ್ಯೆ ಆಗದಂತೆ ಸಕಲ ವ್ಯವಸ್ಥೆ ಮಾಡಲಾಗಿತ್ತು.

ನಗರದ ಪಶ್ಚಿಮದಲ್ಲಿ ನೆಲೆಸಿರುವ ಬರಗೇರಮ್ಮ

ಹಾಗೂ ಪೂರ್ವದಲ್ಲಿ ನೆಲೆಸಿರುವ ತಿಪ್ಪಿನಘಟ್ಟಮ್ಮ ರಾತ್ರಿ 9–41 ನಿಮಿಷದಿಂದ 9–45 ನಿಮಿಷದವರೆಗೆ (4 ನಿಮಿಷ) ಪರಸ್ಪರ ಭೇಟಿಯಾದರು.

ಉಚ್ಚಂಗಿಯಲ್ಲಮ್ಮ ದೇವಸ್ಥಾನದ ಕಡೆಯಿಂದ ಶ್ರೀ ಬರಗೇರಮ್ಮ ಹಾಗೂ ರಂಗಯ್ಯನ ಬಾಗಿಲ ಕಡೆಯಿಂದ ತಿಪ್ಪಿನಘಟ್ಟಮ್ಮ ದೇವಿಯರು ಎದುರುಗೊಳ್ಳುವುದು ಕೆಲವೇ ಕ್ಷಣಗಳು ಮಾತ್ರವಾದರೂ ಇದೊಂದು ಸ್ಮರಣೀಯ ಕ್ಷಣ ಎನ್ನಬಹುದು.ಈ ಕ್ಷಣವನ್ನು ಕಂಡ ಭಕ್ತರು ಏಕಕಾಲಕ್ಕೆ ಅಕ್ಕ ತಂಗಿಯರಿಗೆ ನಮಿಸಿ ತಮ್ಮ ಇಷ್ಟಾರ್ಥ ಸಿದ್ದಿಗೆ ಪ್ರಾರ್ಥಿಸಿಕೊಳ್ಳುವ ಜೊತೆ ಎರಡು ದೈವಗಳ ಪ್ರೀತಿ ಕಂಡು ಪುನೀತರಾದರು.

**ಶೃಂಗಾರಗೊಂಡಿದ್ದ ದೊಡ್ಡಪೇಟೆ:** ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸುತ್ತಿತ್ತು, ಹಸಿರು ತೋರಣ, ಬ್ಯಾರಿಕೇಡ್ ನಿರ್ಮಾಣ ಸೇರಿ ಎಲ್ಲವೂ ದೊಡ್ಡಪೇಟೆಯಲ್ಲಿ ಸಂಜೆಯಿಂದಲೇ ಅಂತಿಮ ಹಂತದ ಸಿದ್ಧತೆಗಳು ಪ್ರಾರಂಭವಾದವು. ಕತ್ತಲು ಅವರಿಸುತ್ತಲೇ ಸಂಜೆವ ಏಳು ಗಂಟೆಯಿಂದಲೇ ದೊಡ್ಡ ರಾಜಬೀದಿಯಲ್ಲಿ ಜಮಾಯಿಸುತ್ತಿದ್ದ ಭಕ್ತರ ಸಂಖ್ಯೆ ಕ್ಷಣದಿಂದ ಕ್ಷಣಕ್ಕೆ ಹೆಚ್ಚಾಯಿತು.

ಅಕ್ಕ–ತಂಗಿ ಭೇಟಿ ಮಹೋತ್ಸವ ನಡೆಯುವ ಸ್ಥಳದಲ್ಲಿ ಅತ್ಯಾಕರ್ಷಕ ಹೂವಿನ ಅಲಂಕಾರ ಸೇವೆ ಮಾಡಲಾಗಿತ್ತು. ಭೇಟಿಯಾಗುವ ಸ್ಥಳದಲ್ಲಿ ಹಾಕಿದ್ದ ಹೂವಿನ ತೋರಣ, ರಂಗೋಲಿ ಉತ್ಸವಕ್ಕೆ ಮತ್ತಷ್ಟು ಮೆರುಗು ತಂದಿತು.

ವಿವಿಧ ಪುಷ್ಪಗಳಿಂದ ಸುಂದರವಾಗಿ ಅಲಂಕೃತಗೊಂಡಿದ್ದ ಅಕ್ಕ ತಂಗಿಯರು ಪರಸ್ಪರ ಭೇಟಿಗಾಗಿ ತವಕಿಸುವ ದೃಶ್ಯ ಸೊಗಸಾಗಿತ್ತು. 'ಏಕನಾಥೇಶ್ವರಿ, ಬರಗೇರಮ್ಮ, ತಿಪ್ಪನಘಟ್ಟಮ್ಮ ಉಧೋ' ಎಂಬ ಹರ್ಷೋದ್ಗಾರ ಭಕ್ತರಿಂದ ಮೊಳಗಿದವು. ದೇವತೆಗಳನ್ನು ಹೊತ್ತ ಅರ್ಚಕರು ಒಂದು ಹೆಜ್ಜೆ ಮುಂದಕ್ಕೆ, ಎರಡು ಹೆಜ್ಜೆ ಹಿಂದಕ್ಕೆ ಇಡುತ್ತಾ, ಉರುಮೆ ನಾದಕ್ಕೆ ತಕ್ಕಂತೆ ಕುಣಿಯುತ್ತ ಪಂಜಿನ ಜೊತೆ ದೇವತೆಗಳು ಮುಂದೆ ಬರುತ್ತಿದ್ದಂತೆ ದೇವತೆಗಳು ಮುಖಾಮುಖಿಯಾದರು.

ಸೋಮನ ಕುಣಿತ, ಡೊಳ್ಳು ಕುಣಿತ,







ದೀವಟಿಗೆಧಾರಿಗಳು, ಉರುಮೆನಾದ, ತಮಟೆಗಳ ಸದ್ದು, ಡೊಳ್ಳು ವಾದನ ಉತ್ಸವಕ್ಕೆ ಹೆಚ್ಚಿನ ಮೆರುಗು ನೀಡಿದವು. ರಾಜಬೀದಿಯಲ್ಲಿಜನದಟ್ಟಣೆನಿಯಂತ್ರಣಕ್ಕೆ ಭೇಟಿ ಮಹೋತ್ಸವ ಸಮಿತಿಯಿಂದ ಫೇಸ್‌ಬುಕ್, ಯೂಟ್ಯೂಬ್ ಲೈವ್ ನಡೆಸಲಾಯಿತು.

**ಅಕ್ಕ–ತಂಗಿ ಭೇಟಿ ಹಿನ್ನೆಲೆ:** ಅಕ್ಕ ತಂಗಿಯರಾದಬರಗೇರಮ್ಮ,ತಿಪ್ಪಿನಘಟ್ಟಮ್ಮ ದೇವತೆಯ ಭೇಟಿ ಉತ್ಸವಕ್ಕೆ ಐತಿಹಾಸಿಕ ಹಿನ್ನೆಲೆಯಿದೆ. ಏಕನಾಥೇಶ್ವರಿ, ಉಚ್ಚಂಗಿ ಯಲ್ಲಮ್ಮ, ಬರಗೇರಮ್ಮ, ತಿಪ್ಪಿನಘಟ್ಟಮ್ಮ, ಕಣಿವೆಮಾರಮ್ಮ, ಚೌಡಮ್ಮ, ಗೌರಸಂದ್ರ ಮಾರಮ್ಮ, ಕುಕ್ಕವಾಡೇಶ್ವರಿ, ಕಾಳಿ ದೇವತೆ ದುರ್ಗದ ದೇವತೆಗಳಾಗಿವೆ.

ತಿಪ್ಪಿನಘಟ್ಟಮ್ಮ ದೇವಿಗೆ ಏಳು ಜನ ಮಕ್ಕಳು. ಈಕೆಯ ಪ್ರೀತಿಯ ಅಕ್ಕ ಬರಗೇರಮ್ಮ ದೇವಿಗೆ ಸಂತಾನವಿರಲಿಲ್ಲ. ಹೀಗಾಗಿ, ತಂಗಿ ಮಕ್ಕಳ ಮೇಲೆ

ಅಪಾರಪ್ರೀತಿ,ವಾತ್ಸಲ್ಯವಿದ್ದಬರಗೇರಮ್ಮ ತಂಗಿ ಮಕ್ಕಳ ಜತೆ ಆಟವಾಡುತ್ತಾ ಕಾಲ ಕಳೆಯುವುದು ರೂಢಿಯಾಗಿತ್ತು.

ಅಕ್ಕ ತಂಗಿಯರ ಪ್ರೀತಿ ಕಂಡು ಅಸೂಯೆ ಪಟ್ಟ ನವ ದುರ್ಗೆಯರಲ್ಲೊಬ್ಬ ದೇವತೆ ತಿಪ್ಪಿನಘಟ್ಟಮ್ಮನಿಗೆ, 'ನಿನ್ನ ಅಕ್ಕನಿಗೆ ಮಕ್ಕಳಿಲ್ಲ ಆಕೆ ನಿನ್ನ ಮಕ್ಕಳನ್ನು ಮುಟ್ಟಿದರೆ ಒಳ್ಳೆಯದಾಗುವುದಿಲ್ಲ' ಎಂದು ಚಾಡಿ ಹೇಳುತ್ತಾಳೆ. ಇದರಿಂದ ಹೆದರಿದ ತಿಪ್ಪಿನಘಟ್ಟಮ್ಮ ತನ್ನ ಅಕ್ಕ ಮನೆಗೆ ಬಂದಾಗ ಆಕೆಯ ದೃಷ್ಟಿಗೆ ಬೀಳಬಾರದೆಂದು ತನ್ನ ಮಕ್ಕಳನ್ನು ಬಚ್ಚಿಡುತ್ತಾಳೆ. ಇದರಿಂದ ಕೋಪಗೊಂಡ ಬರಗೇರಮ್ಮ ಸಿಟ್ಟಿನಲ್ಲಿ 'ನಿನ್ನ ಮಕ್ಕಳು ಕಲ್ಲಾಗಲಿ' ಇದೇ ಕೊನೆ ಎಂದಿಗೂ ನಿನ್ನ ಮುಖ ನೋಡುವುದಿಲ್ಲ ಎಂದು ಹೇಳಿ ಹಿಂತಿರುಗುತ್ತಾಳೆ.

ಆಗ ಹಿರಿಯಳಾದ ಏಕನಾಥೇಶ್ವರಿ ಊರಿನ ಒಳಿತಿಗಾಗಿ ವರ್ಷಕ್ಕೊಮ್ಮೆ ತನ್ನ ಸಮ್ಮುಖದಲ್ಲಿ ನೀವಿಬ್ಬರು ಭೇಟಿಯಾಗಬೇಕೆಂದು ಆದೇಶಿಸುತ್ತಾಳೆ. ಹಿರಿಯಕ್ಕನ ಮಾತಿನಂತೆ ಪ್ರತಿ ವರ್ಷ ಈ ಇಬ್ಬರು ರಾಜಬೀದಿಯಲ್ಲಿ ಭೇಟಿಯಾಗುತ್ತಾರೆ. ಈ ಕ್ಷಣವನ್ನು ಮೇಲುದುರ್ಗದಿಂದ ಏಕನಾಥೇಶ್ವರಿ ದೇವಿ ವೀಕ್ಷಿಸುತ್ತಾಳೆ ಎಂಬ ಪ್ರತೀತಿ ಭಕ್ತರಲ್ಲಿದೆ.

ಈ ಭೇಟಿ ಉತ್ಸವ ಕಾರ್ಯಕ್ರಮದಲ್ಲಿ ಚಿತ್ರದುರ್ಗ ತಹಶೀಲ್ದಾರ್ ನಾಗವೇಣಿ,

ಮಾಜಿ ಶಾಸಕ ಎಸ್.ಕೆ.ಬಸವರಾಜನ್, ಯುವ ಮುಖಂಡ ಎಂ.ಸಿ.ರಘುಚಂದನ್ ,ನಗರಸಭೆ ಸದಸ್ಯರಾದ ಬಾಸ್ಕರ್, ಅನುರಾಧ ರವಿಕುಮಾರ್, ನಗರಸಭೆ ಪೌರಯುಕ್ತೆ ರೇಣುಕಾ, ಭೇಟಿ ಉತ್ಸವ ಉಸ್ತುವಾರಿ ಸಿ.ಟಿ.ಕೃಷ್ಣಮೂರ್ತಿ, ಭೇಟಿ ಉತ್ಸವ ಸಮಿತಿ ಅಧ್ಯಕ್ಷ ಕೆ.ಸಿ.ನಾಗರಾಜ್, ದೊಡ್ಡಗರಡಿ ಅಧ್ಯಕ್ಷ ತಿಮ್ಮಣ್ಣ, ಸಂಘಟನ ಕಾರ್ಯದರ್ಶಿ ವಕೀಲ ಉಮೇಶ್, ಮಾಜಿ ನಗರಸಭೆ ಸದಸ್ಯ ರಾಜೇಶ್ ಮತ್ತು ಸಿಟಿಕೆ ಪುತ್ರ ಅರ್ಜುನ್ ಮತ್ತು ಅವರ ತಂಡ ಸ್ವಯಂ ಸೇವಕರಾಗಿ ಭೇಟಿಯಲ್ಲಿ ಸೇವೆ ಸಲ್ಲಿಸಿದರು..

### ಫಾಸ್ಟ್ ನ್ಯೂಸ್

## ಪರಿಹಾರ ಮೊತ್ತ ಬ್ಯಾಂಕ್‌ನವರು ಸಾಲಕ್ಕೆ ಜಮೆ ಮಾಡಿಕೊಳ್ಳುವಂತಿಲ್ಲ

» ಚಿತ್ರದುರ್ಗ



ಡಿಬಿಟಿ ಮುಖಾಂತರ ರೈತರ ಖಾತೆಗೆ ಜಮೆಯಾಗುವ ಪರಿಹಾರ ಮೊತ್ತವನ್ನು ಬ್ಯಾಂಕ್‌ನವರು ಸಾಲಕ್ಕೆ ಜಮೆ ಮಾಡಿಕೊಳ್ಳಬಾರದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದ್ದಾರೆ. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ರೈತರ ಸಭೆಯಲ್ಲಿ, ರೈತರು ಬೆಳೆವಿಮೆ ಪರಿಹಾರ, ಬರ ಪರಿಹಾರ, ಪಿಎಂ ಕಿಸಾನ್, ಹಾಲಿನ ಸಹಾಯಧನದ ಮೊತ್ತ, ಉದ್ಯೋಗ ಖಾತ್ರಿಯ ಕೂಲಿ ಮೊತ್ತವನ್ನು ಬ್ಯಾಂಕ್‌ನವರು ರೈತರ ಸಾಲಕ್ಕೆ ಜಮೆ ಮಾಡಿಕೊಳ್ಳುತ್ತಿರುವ ಬಗ್ಗೆ ರೈತರು, ರೈತ ಮುಖಂಡರು ದೂರಿದ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ರೈತರ ಖಾತೆಗೆ ಜಮೆಯಾಗುವ ಪರಿಹಾರ, ಸಹಾಯಧನ ಮೊತ್ತವನ್ನು ಸರ್ಕಾರವು ನಿರ್ದಿಷ್ಟ ಉದ್ದೇಶಗಳಿಗಾಗಿ ನೀಡುತ್ತಿದ್ದು, ಈ ಮೊತ್ತವನ್ನು ಯಾವುದೇ ಬ್ಯಾಂಕುಗಳು ಸಾಲಗಳಿಗೆ ಜಮೆ ಮಾಡಿಕೊಳ್ಳದೇ ಇರಲು ಕಟ್ಟುನಿಟ್ಟಿನ ನಿರ್ದೇಶನ ನೀಡಿ ಆದೇಶಿಸಿದ್ದಾರೆ.

## 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

2024–25ನೇ ಸಾಲಿಗೆ "ಪ್ರತಿಷ್ಠಿತ ಶಾಲೆಗಳಿಗೆ ಪ್ರತಿಭಾವಂತ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು "ಆಯ್ಕೆ ಮಾಡುವ ಕಾರ್ಯಕ್ರಮದಡಿ ಹೊಸದುರ್ಗ ತಾಲ್ಲೂಕು ವ್ಯಾಪ್ತಿಯಲ್ಲಿ 5ನೇ ತರಗತಿಯಲ್ಲಿ ತೇರ್ಗಡೆಯಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ 6ನೇ ತರಗತಿಗೆ ಪ್ರವೇಶ ನೀಡಲು ಆನ್‌ಲೈನ್ ಮುಖಾಂತರ ನೊಂದಣಿ ಮಾಡಿಕೊಳ್ಳಲು ಮೇ 9 ರಿಂದ ಮೇ21 ರ ವರೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆನ್‌ಲೈನ್ ನೋಂದಣಿ ಪ್ರಕ್ರಿಯೆಯು ಹೊಸದುರ್ಗ ತಾಲ್ಲೂಕಿನ ಸಹಾಯಕ ನಿರ್ದೇಶಕರು (ಗ್ರೇಡ್–2) ಸಮಾಜ ಕಲ್ಯಾಣ ಇಲಾಖೆಯ ಕಛೇರಿ ವೇಳೆಯಲ್ಲಿ ನೊಂದಣಿ ಮಾಡಲಾಗುವುದು. ಸಂಬಂಧಪಟ್ಟ ಎಲ್ಲಾ ದಾಖಲಾತಿಗಳೊಂದಿಗೆ ಪೋಷಕರು ಈ ಕಛೇರಿಗಳಲ್ಲಿ ಆನ್‌ಲೈನ್ ಮೂಲಕ ನೊಂದಣಿ ಮಾಡಿಸುವಂತೆ ಸೂಚಿಸಿದೆ. ಮೇ 21 ರ ಕೊನೆಯ ದಿನಾಂಕದ ನಂತರ ಬಂದಂತಹ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಷರತ್ತುಗಳು: ವಿದ್ಯಾರ್ಥಿಯು ಪರಿಶಿಷ್ಟ ಜಾತಿಗೆ ಸೇರಿದ್ದು, ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಮೀರಿರಬಾರದು. ಪ್ರತಿಭಾವಂತ ವಿದ್ಯಾರ್ಥಿಯಾಗಿರಬೇಕು. 5ನೇ ತರಗತಿಯಲ್ಲಿ ಶೇ.60ರಷ್ಟು ಅಂಕ ಪಡೆದಿರಬೇಕು. ನಿಗಧಿಪಡಿಸಲಾದ ಗುರಿಯಲ್ಲಿ ಬಾಲಕಿಯರಿಗೆ ಶೇ50ರಷ್ಟು ಮೀಸಲಾತಿ ಇರುತ್ತದೆ. ವಿದ್ಯಾರ್ಥಿಗಳು ಪ್ರತಿಷ್ಟಿತ ಶಾಲೆಗಳ ಆಯ್ಕೆ ಕೋರಿ ವಿದ್ಯಾರ್ಥಿಗಳು ಆನ್ ಲೈನ್ ಮೂಲಕವೇ ಅರ್ಜಿ ಸಲ್ಲಿಸತಕ್ಕದ್ದು. ಒಂದೇ ಕುಟುಂಬದಲ್ಲಿ ಇಬ್ಬರಿಗೆ ಒಬ್ಬ ಬಾಲಕ ಮತ್ತು ಒಬ್ಬ ಬಾಲಕಿ, ಬಾಲಕ ಇಲ್ಲದಿದ್ದಲ್ಲಿ ಇಬ್ಬರು ಬಾಲಕಿಯರಿಗೂ ಅಥವಾ ಬಾಲಲಿ ಇಲ್ಲದಿದ್ದಲ್ಲಿ ಇಬ್ಬರೂ ಬಾಲಕರಿಗೆ ಪ್ರವೇಶಾವಕಾಶ ಕಲ್ಪಿಸಲಾಗುವುದು. 5ನೇ ತರಗತಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳು ಮಾತ್ರ ಅರ್ಜಿ ಸಲ್ಲಿಸುವುದು. ಪೋಷಕರು ನಿಗಧಿತ ಅರ್ಜಿಯೊಂದಿಗೆ 04 ಪಾಸ್ ಪೋರ್ಟ್ ಸೈಜ್ ಭಾವಚಿತ್ರ, 5ನೇ ತರಗತಿಯ ಅಂಕಪಟ್ಟಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್. ಇತ್ಯಾದಿ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬೇಕು ಎಂದು ಹೊಸದುರ್ಗ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು (ಗ್ರೇಡ್–1) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮತದಾನ ಪ್ರಮಾಣ ಭಾರಿ ಹೆಚ್ಚಳ ನಿರೀಕ್ಷೆ, ಯಶಸ್ಸಿಗೆ ಕಾರಣರಾದ ಅಧಿಕಾರಿಗಳ ತಂಡ, ಮತದಾರರಿಗೆ ಜಿಲ್ಲಾಡಳಿತದಿಂದ ಅಭಿನಂದನೆ

# ಲೋಕಸಭಾ ಚುನಾವಣೆ: ದಾವಣಗೆರೆ ಜಿಲ್ಲೆಯಲ್ಲಿ ಶಾಂತಯುತ ಮತದಾನ

» ದಾವಣಗೆರೆ

18 ನೇ ಲೋಕಸಭಾ ಚುನಾವಣೆ ನಡೆಯುತ್ತಿದ್ದು ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಮೇ 7 ರಂದು ನಡೆದ ಮತದಾನವು ಸಂಪೂರ್ಣ ಶಾಂತಯುತವಾಗಿ ನಡೆದಿದ್ದು ಮತಪ್ರಮಾಣದಲ್ಲಿ ಭಾರಿ ಹೆಚ್ಚಳ ನಿರೀಕ್ಷಿಸಿ ಯಶಸ್ವಿ ಚುನಾವಣೆ ನಡೆಸಲು ಶ್ರಮಿಸಿದ ಅಧಿಕಾರಿಗಳು ಮತ್ತು ಸಹಕಾರ ನೀಡಿದ ಮತದಾರರು ಹಾಗೂ ಸಾರ್ವಜನಿಕರಿಗೆ ಜಿಲ್ಲಾಡಳಿತದಿಂದ ಅಭಿನಂದನೆಗಳನ್ನು ಸಲ್ಲಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ



ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.

ದಾವಣಗೆರೆ ಲೋಕಸಭಾ ಕ್ಷೇತ್ರ ಹರಪನಹಳ್ಳಿ ಸೇರಿದಂತೆ 8 ವಿಧಾನಸಭಾ ಕ್ಷೇತ್ರಗಳನ್ನು ಹೊಂದಿರುತ್ತದೆ. ಇಲ್ಲಿ ಒಟ್ಟು 1946 ಮತಗಟ್ಟೆಗಳಿಂದ 851990 ಪುರುಷ, 857117 ಮಹಿಳಾ, 137 ಇತರೆ ಮತದಾರರು ಸೇರಿ 1709244 ಮತದಾರರಿದ್ದರು.

ಮಂಗಳವಾರ ಬೆಳಗ್ಗೆ ಅಣಕು ಮತದಾನ ನಂತರ 7 ಗಂಟೆಯಿಂದ ಸ್ವಲ್ಪ ಮಂದಗತಿಯಿಂದ ಆರಂಭವಾದ ಮತದಾನ 9 ಗಂಟೆಯವರೆಗೆ ಶೇ 9.13 ರಷ್ಟು ಮತದಾನವಾಗಿತ್ತು. ಇದು 11 ಗಂಟೆಯ ವೇಳೆಗೆ ಏರುಗತಿಯಲ್ಲಿ ಸಾಗಿ ಶೇ 23.77 ರಷ್ಟು ದಾಖಲಾಯಿತು. ಮಧ್ಯಾಹ್ನ ಬಿಸಿಲಿನಲ್ಲಿಯು ಸರತಿ ಸಾಲಿನಲ್ಲಿ ನಿಂತ ಜನರಿಂದ ಮತದಾನ ಚುರುಕುಗೊಂಡು ಮಧ್ಯಾಹ್ನ 1 ಗಂಟೆಗೆ ಮತದಾನ ಪ್ರಮಾಣ ಶೇ 42.27 ಕ್ಕೇರಿತು. ಮಧ್ಯಾಹ್ನ 3 ಗಂಟೆಗೆ 57.34 ರಷ್ಟು ದಾಖಲಿಸಿ ಸಂಜೆ 5 ಗಂಟೆಗೆ ಶೇ 70.94 ರಷ್ಟು ಮತದಾನವಾಗಿತ್ತು.


ಪುಟ 2

## ಫಾಸ್ಟ್ ನ್ಯೂಸ್

### ಬಸವ ಜಯಂತ್ಯೋತ್ಸವ

» **ದಾವಣಗೆರೆ**

ನಗರದ ಕಾಯಿಪೇಟೆ ಶ್ರೀ ಬಸವೇಶ್ವರ ನಗರದಲ್ಲಿರುವ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ 10 ರಂದು ಬಸವೇಶ್ವರ ಜಯಂತ್ಯೋತ್ಸವ ನಡೆಯಲಿದೆ. ಅಂದು ಬೆಳಿಗ್ಗೆ 7 ರಿಂದ 9 ರವರೆಗೆ ತೊಟ್ಟಿಲು ಪೂಜೆ, ಸಂಜೆ 5 ಗಂಟೆಗೆ ವಿದ್ಯುತ್ ಅಲಂಕೃತ ವಾದ ಭವ್ಯವಾದ ಹೂವಿನ ಮಂಟಪದಲ್ಲಿ ಶ್ರೀ ಬಸವೇಶ್ವರ ಮೂರ್ತಿಯ ಮೆರವಣಿಗೆ ರಾಜಬೀದಿಗಳಲ್ಲಿ ಜರುಗಲಿದೆ. 9ರಂದು ಬಸವೇಶ್ವರ ಪಾದಕ್ಕೆ ಮಹಾರುದ್ರಾಭಿಷೇಕ ಏರ್ಪಡಿಸಲಾಗಿದೆ. 11ರಂದು ಅನ್ನ ಸಂತರ್ಪಣೆ ಏರ್ಪಡಿಸಲಾಗಿದೆ ಎಂದು ಬಸವೇಶ್ವರ ದೇವಸ್ಥಾನ ಸೇವಾ ಸಂಘದ ಪದಾಧಿಕಾರಿಗಳು ತಿಳಿಸಿದ್ದಾರೆ.

### ಸುಭದ್ರ ದೇಶಕ್ಕಾಗಿ ಮತ ದಾನ ಮಾಡಿ

» **ದಾವಣಗೆರೆ**

ಭವ್ಯ ಭಾರತದ ಮಹಾ ಲೋಕಸಭಾ ಚುನಾವಣೆ ಇದಾಗಿದ್ದು, ನಮಗೆ ಬೇಕಾದ ಸರ್ಕಾರ ರಚನೆ ಮಾಡಿಕೊಳ್ಳುವ ಸುವರ್ಣಾವಕಾಶ. ಉತ್ತಮರಿಗೆ ಮತದಾನ ಮಾಡುವ ಮೂಲಕ ಬೃಹತ್ ಪ್ರಜಾಪ್ರಭುತ್ವ. ಸುಭದ್ರ, ಪಾರದರ್ಶಕ, ಸ್ವಚ್ಛ ಭಾರತ ನಿರ್ಮಾಣ ಮಾಡೋಣ ಎಂದು ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್.ಅರುಣ್‌ಕುಮಾರ್ ಕರೆ ನೀಡಿದ್ದಾರೆ. ನಗರದ ಜಯನಗರ ಸಿ ಬ್ಲಾಕ್, ಬಾವಾಜಿ ಬಡಾವಣೆಯಲ್ಲಿರುವ ಮೌಂಟ್ ಎವರೆಸ್ಟ್ ಶಾಲೆಯಲ್ಲಿ ಮತದಾನ ಮಾಡಿದ ನಂತರ, ಬನ್ನಿ ಮತದಾನ ಮಾಡೋಣ. ಹೆಸರೇ ಸೂಚಿಸುವಂತೆ ಮತವನ್ನು ದಾನಮಾಡೋಣ. ಆಸೆ ಆಮಿಷಗಳಿಗೆ ಮರುಳಾಗ ಬೇಡಿ ಎಂದು ಸಲಹೆ ನೀಡಿದ್ದಾರೆ.

### ವಿಜ್ಞಾನ ಶಿಕ್ಷಕ ಎಸ್.ಶಿವಕುಮಾರ್ ನಿಧನ.

» **ಚಳ್ಳಕೆರೆ**



ನಗರದ ಕಾಟಪ್ಪನಹಟ್ಟಿಯ ವಿಜ್ಞಾನ ಶಿಕ್ಷಕ ಎಸ್.ಶಿವಕುಮಾರ್(55) ರಾತ್ರಿ ತಮ್ಮ ಮನೆಯಲ್ಲಿಯೇ ಮಲಗಿದ್ದ ಸಂದರ್ಭದಲ್ಲಿ ಲೋಬಿಪಿಯಿಂದ ನಿಧನರಾಗಿರುತ್ತಾರೆ. ಪ್ರಸ್ತುತ ಅವರು ಗಾಂಧಿನಗರದ ತಮ್ಮ ಸ್ವಂತ ಮನೆಯಲ್ಲಿ ವಾಸವಿದ್ದು, ತಳಕು ಹೋಬಳಿ ತಿಮ್ಮನಹಳ್ಳಿ ಗ್ರಾಮದ ಮೂಡಲಗಿರಿಯಪ್ಪ ಗ್ರಾಮೀಣ ಪ್ರೌಢಶಾಲೆಯಲ್ಲಿ ಕಳೆದ 10 ವರ್ಷಗಳಿಂದ ವಿಜ್ಞಾನ ಶಿಕ್ಷಕರಾಗಿ ಕಾರ್ಯನಿರ್ವಹಿಸುತ್ತಿದ್ದರು. ಪತ್ನಿ ಮಹಾಲಕ್ಷ್ಮಿ, ಮೂವರು ಪುತ್ರಿಯರು ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಪಾವಗಡ ರಸ್ತೆಯ ರುದ್ರಭೂಮಿಯಲ್ಲಿ ಮಂಗಳವಾರ ಸಂಜೆ ನಡೆಯಿತು.

### ಅಬ್ಬರ ಸಿಡಿಲಿಗೆ ಬೂದಿಹಳ್ಳಿ ಗ್ರಾಮದ ತೋಟದಲ್ಲಿದ್ದ 2 ತೆಂಗಿನ ಮರಗಳು ಭಸ್ಮ



» **ಚಳ್ಳಕೆರೆ**

ತಾಲ್ಲೂಕಿನ ಗಡಿಭಾಗದ ಗ್ರಾಮಗಳಲ್ಲಿ ಸೋಮವಾರದಿಂದ ಆರಂಭವಾದ ಮಳೆ ಮಂಗಳವಾರವೂ ಸಹ ಮುಂದುವರೆದಿದೆ. ಮಂಗಳವಾರ ಸಂಜೆ ಗಾಳಿಯಿಂದ ಕೂಡಿದ ಮಳೆ ಆಗಮಿಸಿದ್ದು, ಇದೇ ಸಂದರ್ಭದಲ್ಲಿ ಸಿಡಿಲು ಹೊಡೆದು ಬೂದಿಹಳ್ಳಿ ಗ್ರಾಮದ ಬುಡ್ಡೆಪ್ಪರಈರಣ್ಣನವರ ತೋಟದಲ್ಲಿದ್ದ ಎರಡು ತೆಂಗಿನ ಮರಗಳು ಹೊತ್ತಿಉರಿದಿವೆ.

ಸಿಡಿಲು ನೇರವಾಗಿ ಮರದ ಮಧ್ಯಭಾಗಕ್ಕೆ ಹೊಡೆದಿದ್ದು, ಸಿಡಿಲಿನ ಬೆಂಕಿ ಉರಿಯುತ್ತಲೇ ಇತ್ತು. ತೋಟದಲ್ಲಿ ಕೆಲಸ ನಿರ್ವಹಿಸುತ್ತಿದ್ದ ಬುಡ್ಡೆಪ್ಪರಈರಣ್ಣ ಪುತ್ರ ಬೂದಿಹಳ್ಳಿರಾಜು ಸೇರಿದಂತೆ ಕೂಲಿಕಾರ್ಮಿಕರು ದಿಢೀರ್ ಹೊಡೆದ ಸಿಡಿಲಿಗೆ ಭಯಭೀತರಾದರು.



**ಶರಣರ ಜೀವನ ಮಾರ್ಗ, ಆದರ್ಶಗಳನ್ನು ಅಳವಡಿಸಿಕೊಳ್ಳುವಂತೆ ಭಕ್ತ ಸಮೂಹಕ್ಕೆ ಜಯಬಸವ ಕುಮಾರಸ್ವಾಮಿ ಕರೆ**

### ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

# ಸಿಇಸಿಯಿಂದ ಕೆಎಂಇಆರ್‌ಸಿ ಕಾಮಗಾರಿ ಮೇಲ್ವಿಚಾರಣೆ ಲೋಪವಾಗದಂತೆ ಯೋಜನೆಗಳನ್ನು ಅನುಷ್ಠಾಗೊಳಿಸಿ

» **ಚಿತ್ರದುರ್ಗ**



ಜಿಲ್ಲೆಯ ಗಣಿ ಬಾಧಿತ ಪ್ರದೇಶಗಳ ಸಮಗ್ರ ಪರಿಸರ ಅಭಿವೃದ್ಧಿ ಯೋಜನೆ (ಸಿ.ಇ.ಪಿ.ಎಂ.ಐ.ರ್ಝಡ್)ಯಡಿ ಅನುಮೋದನೆಗೆ ಬಾಕಿ ಇರುವ ಕಾಮಗಾರಿಗಳ ವಿಸ್ತೃತ ಯೋಜನಾ ವರದಿ ಶೀಘ್ರವೇ ಸಿದ್ಧಪಡಿಸಿ ಕರ್ನಾಟಕ ಗಣಿ ಪರಿಸರ ಪುನಃಶ್ಚೇತನ ನಿಗಮಕ್ಕೆ (ಕೆ.ಎಂ.ಇ.ಆರ್.ಸಿ) ಸಲ್ಲಿಸಬೇಕು. ಸುಪ್ರಿಂ ಕೋರ್ಟ್‌ನಿಂದ ಸ್ಥಾಪಿತವಾಗಿರುವ ಸೆಂಟ್ರಲ್ ಎಂಪವರ್ ಕಮಿಟಿ (ಸಿಇಸಿ) ಈ ಎಲ್ಲಾ ಕಾಮಗಾರಿಗಳ ಮೇಲ್ವಿಚಾರಣೆ ನಡೆಸಲಿದೆ. ಎಚ್ಚರಿಕೆಯಿಂದ ಯಾವುದೇ ರೀತಿಯ ಲೋಪವಾಗದಂತೆ ಕಾಮಗಾರಿ ಅನುಷ್ಠಾನಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಕುರಿತು ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಾಮಗಾರಿಗಳಿಗೆ ಸಂಬಂಧಪಟ್ಟ ದಾಖಲೆಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಕಾಮಗಾರಿ ಆರಂಭಕ್ಕೂ ಮುನ್ನ ಕಾಮಗಾರಿ ಸ್ಥಳದ ಫೋಟೋ ಮತ್ತು ವಿಡಿಯೋಗ್ರಫಿ ಮಾಡಿ ಇಟ್ಟುಕೊಳ್ಳಬೇಕು. ಪೂರ್ಣಗೊಂಡ ನಂತರವೂ ಫೋಟೋ ಮತ್ತು ವಿಡಿಯೋಗ್ರಫಿಯ ದಾಖಲೆಗಳು ಇಟ್ಟುಕೊಳ್ಳಬೇಕು. ಎಚ್ಚರಿಕೆಯಿಂದ ಕಾಮಗಾರಿ ನಿರ್ವಹಿಸುವುದರೊಂದಿಗೆ, ಕೆ.ಎಂ.ಇ.ಆರ್.ಸಿ ಗೆ ಸೂಕ್ತ ದಾಲೆಗಳನ್ನು ಸಲ್ಲಿಸಬೇಕು. ಕಾಮಗಾರಿ ವೇಳೆ ಯಾವುದೇ ರೀತಿಯ ಸಂದೇಹಗಳು ಕಂಡುಬಂದರೆ, ಕೆ.ಎಂ.ಇ.ಆರ್.ಸಿಯಿಂದ ಸೂಕ್ತ ನಿರ್ದೇಶನ ಪಡೆದು ಕಾಮಗಾರಿ ಆರಂಭಿಸಬೇಕು. ಕ್ರಮಬದ್ಧವಾಗಿ ಕಾರ್ಯನಿರ್ವಹಿಸಿದರೆ ಯಾವುದೇ ಸಮಸ್ಯೆಗಳು ತಲೆದೋರುವುದಿಲ್ಲ. ಯಾವುದೇ ಕಾರಣಕ್ಕೂ ಯೋಜನೆಗಳನ್ನು ಹಗುರವಾಗಿ ಕಾಣಬೇಡಿ. ಯೋಜನೆ ಬದಲಾವಣೆಗೆ ಜನಪ್ರತಿನಿಧಿಗಳಿಂದ ಒತ್ತಡ ಕೇಳಿ ಬಂದರೆ, ಜನಪ್ರತಿನಿಧಿಗಳಿಗೆ ತಿಳಿ ಹೇಳಿ, ಇಲ್ಲವಾದರೆ ಅವರ ಅಹವಾಲುಗಳನ್ನು ಕೆ.ಎಂ.ಇ.ಆರ್.ಸಿಗೆ ಸಲ್ಲಿಸಿ. ನಿಮ್ಮ ಹಂತದಲ್ಲಿ ಯಾವುದೇ ಕಾರಣಕ್ಕೂ ಯೋಜನೆಗಳಲ್ಲಿ ಬದಲಾವಣೆ ಮಾಡಬೇಡಿ. ಇದು ಗಂಭೀರ ಲೋಪ ಎಂದು ಪರಿಗಣಿಸಲಾಗುವುದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಕಾಮಗಾರಿಗಳ ಮೇಲ್ವಿಚಾರಣೆಗೆ ಪ್ರತ್ಯೇಕ ವಿಭಾಗ: ವಾರಕೊಮ್ಮೆ ಪರಿಶೀಲನೆ–ಜಿಲ್ಲೆಯ ಡಿ.ಎಂ.ಎಫ್ ಹಾಗೂ ಕೆ.ಎಂ.ಇ.ಆರ್.ಸಿ ಕಾಮಗಾರಿಗಳ ಮೇಲ್ವಿಚಾರಣೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪ್ರತ್ಯೇಕ ವಿಭಾಗ ತೆರೆಯಲಾಗುವುದು. ಪ್ರತಿ ವಾರಕೊಮ್ಮೆ ಇಲಾಖಾವಾರು ಪ್ರಗತಿ ಪರಿಶೀಲನೆ ನಡೆಸಲಾಗುವುದು. ಯಾವುದೇ ಕಾರಣಕ್ಕೂ ಕಾಮಗಾರಿಗಳ ಅತಿಕ್ರಮಣವಾಗಬಾರದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

ಈ ಸಂದರ್ಭದಲ್ಲಿ ಲೋಕೋಪಯೋಗಿ, ಸಣ್ಣ ನೀರಾವರಿ, ತೋಟಗಾರಿಕೆ, ಕೌಶಲ್ಯಾಭಿವೃದ್ಧಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಶಿಕ್ಷಣ, ಅರಣ್ಯ, ತೋಟಗಾರಿಕೆ, ರೇಷ್ಮೆ ಸೇರಿದಂತೆ ವಿವಿಧ ಇಲಾಖೆಗಳ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು. ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಮುಖ್ಯ ಯೋಜನಾಧಿಕಾರಿ ಸತೀಶ್‌ರೆಡ್ಡಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ರಾಜಣ್ಣ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಮಲ್ಲಿಕಾರ್ಜುನ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಸವಿತಾ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಮೊದಲ ಮಳೆ ತಂದ ಅವಾಂತರ: ಅಡಿಕೆ, ಬಾಳೆ, ಮೆಕ್ಕೆಜೋಳ ಬೆಳೆ ನೆಲಕಚ್ಚಿ ಲಕ್ಷಾಂತರ ನಷ್ಟ






» **ಚಳ್ಳಕೆರೆ**

ಚಳ್ಳಕೆರೆ ತಾಲ್ಲೂಕಿಗೆ ಆಗಮಿಸಿದ ಪ್ರಸ್ತುತ ವರ್ಷದ ಮೊದಲ ಮಳೆ ಜನರಲ್ಲಿ ಉಲ್ಲಾಸದ ಜೊತೆಗೆ ನಷ್ಟವನ್ನು ಸಹ ಉಂಟುಮಾಡಿದೆ. ಸೋಮವಾರ ಸಂಜೆ ತಾಲ್ಲೂಕಿನ ಗಡಿಭಾಗದ ಗ್ರಾಮವಾದ ಸಿರಿವಾಳಓಬಳಾಪುರ ಹಾಗೂ ಇನ್ನಿತರ ಕಡೆಗಳಲ್ಲಿ ಉತ್ತಮ ಮಳೆಯಾಗಿದ್ದು ಮಳೆಯೊಂದಿಗೆ ಲಕ್ಷಾಂತರ ರೂಪಾಯಿಯ ಬೆಳೆ ನಷ್ಟವಾಗಿದೆ.

ಓಬಳಾಪುರ ಗ್ರಾಮದ ಶಂಕರಪ್ಪ, ಗಂಗಾಧರಪ್ಪ ಎಂಬುವವರ ಒಟ್ಟು ನಾಲ್ಕು ಎಕರೆ ಪ್ರದೇಶದಲ್ಲಿದ್ದ ಮೆಕ್ಕೆಜೋಳ ಗಾಳಿ, ಮಳೆಗೆ ನೆಲಕಚ್ಚಿದ್ದು ಸುಮಾರು 50 ಸಾವಿರಕ್ಕೂ ಹೆಚ್ಚು ನಷ್ಟ ಉಂಟಾಗಿದೆ. ಗ್ರಾಮದ ಯಲ್ಲಕ್ಕ ಎಂಬುವವರ ಸುಮಾರು 5.20 ಎಕರೆ ಪ್ರದೇಶದಲ್ಲಿದ್ದ ಫಸಲಿಗೆ ಬಂದಿದ್ದ ಬಾಳೆ ಮಳೆಗೆ ನೆಲಕ್ಕೆ ಬಿದ್ದು ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ. ಗ್ರಾಮದ ವರಲಕ್ಷ್ಮಿ ಎಂಬುವವರ ಮೂರು ಎಕರೆ ಬಾಳೆ ತೋಟದ ಬಾಳೆ ಗಿಡಗಳು ನೆಲಕ್ಕೆ ಬಿದ್ದು ಲಕ್ಷಾಂತರ ರೂಪಾಯಿ ನಷ್ಟವಾಗಿದೆ. ಶಿವಶಂಕರಪ್ಪ ಮತ್ತು ಶಾಂತಕುಮಾರ್ ಎಂಬುವವರ ಸುಮಾರು 30 ಅಡಿಕೆ ಮರಗಳು, ಓಬಳಾಪುರ ಕಾವಲ್‌ನ ಯರ್ರಿಸ್ವಾಮಿ ಎಂಬುವವರ 30 ಅಡಿಕೆ ಮರಗಳು ಮಳೆ ಗಾಳಿಗೆ ಮುರಿದು ಬಿದ್ದು ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ. ಗ್ರಾಮ ಲೆಕ್ಕಾಧಿಕಾರಿ ಗ್ರಾಮಕ್ಕೆ ತೆರಳಿ ತೋಟಗಾರಿಕೆ, ಕೃಷಿ ಬೆಳೆ ಹಾನಿಕುರಿತಂತೆ ತಾಲ್ಲೂಕು ಆಡಳಿತಕ್ಕೆ ವರದಿ ನೀಡಿದ್ದಾರೆ.

## ಕಣಿವೆ ಮಾರಮ್ಮದೇವಿ ಮಾದಲಿಂಗಿತ್ತಿ ಶಾಸ್ತ್ರದ ಸಂಭ್ರಮ

» **ಹೊಸದುರ್ಗ**

ಹೊಸದುರ್ಗ ತಾಲೂಕಿನ ಮಾಡದಕೆರೆ ಹೋಬಳಿಯ ಲಕ್ಕಿಹಳ್ಳಿ ಗ್ರಾಮದಲ್ಲಿ ನೆಲೆಸಿರುವ ಶಕ್ತಿ ದೇವತೆ ಶ್ರೀ ಕಣಿವೆ ಮಾರಮ್ಮ ದೇವಿಯ ಮದಲಿಂಗಿತ್ತಿ ಶಾಸ್ತ್ರ ಕಾರ್ಯ ಪ್ರತಿವರ್ಷದಂತೆ ಧಾರ್ಮಿಕ ಸಂಪ್ರದಾಯದಂತೆ ಮಂಗಳವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ಸಂಭ್ರಮದಿಂದ ನೆರವೇರಿತು.

ಸೋಮವಾರ ಅಮ್ಮನವರಿಗೆ ಗ್ರಾಮದ ಹೊರವಲಯದಲ್ಲಿರುವ ದಾರಮಾದೇಶ್ವರ ಸ್ವಾಮಿ ದೇವಾಲಯದ ಬಳಿಯಿರುವ ಏಳುಮಂದಿಯಕ್ಕನ ಬಾವಿಯಲ್ಲಿ ಗಂಗಾಸ್ನಾನ ಮತ್ತು ಪುಣ್ಯಾಹ ಪೂಜಾ ಕಾರ್ಯ ನಡೆಯಿತು. ನಂತರ ಸಂಜೆ ಅಮ್ಮನವರನ್ನು ರಾಜಮರ್ಯಾದೆಗಳೊಂದಿಗೆ ಗ್ರಾಮಕ್ಕೆ ಕರೆತರಲಾಯಿತು. ಗ್ರಾಮಕ್ಕೆ ಬಂದಿದ್ದ ಭರಮಗಿರಿ ಶ್ರೀ ಕಣಿವೆ ಮಾರಮ್ಮ ದೇವಿಗೆ ಕೂಡು ಭೇಟಿ ಮಾಡಿ, ಮಾದಾಲ್ನೆ ಮೂಲಕ ದೇವಾಲಯಕ್ಕೆ ಕರೆತರಲಾಯಿತು.



ಪ್ರತಿವರ್ಷದಂತೆ ಈ ವರ್ಷವೂ ಧಾರ್ಮಿಕ ಸಾಂಪ್ರಯದಂತೆ ಗೌಡರ ಮನೆಯವರು ಮದಲಿಂಗಿತ್ತಿ ಶಾಸ್ತ್ರ ನಡೆಸಿದರು. ಬಳಿಕ ಪೂಜಾರರಿಗೆ ಪಟ್ಟಕಟ್ಟುವ ಕಾರ್ಯ ಜರುಗಿತು. ಗ್ರಾಮದ ಸಮಸ್ತ ಭಕ್ತರು ಪೂಜೆ ಸಲ್ಲಿಸಿ ಭಕ್ತಿ ಸಮರ್ಪಿಸಿದರು. ನಂತರ ಭರಮಗಿರಿ ಗ್ರಾಮದಿಂದ ಆಗಮಿಸಿದ್ದ ಶ್ರೀ ಕಣಿವೆ ಮಾರಮ್ಮ ದೇವಿಯನ್ನು ಕಳಿಸಿಕೊಡಲಾಯಿತು.

# ಗ್ರಾಮ ದೇವತೆ ಕರಿಯಮ್ಮದೇವಿ ಮಹಾದ್ವಾರ ನಿರ್ಮಾಣಕ್ಕೆ ಗುದ್ದಲಿಪೂಜೆ ಯಶಸ್ವಿ

» **ಚಳ್ಳಕೆರೆ**

ತಾಲ್ಲೂಕಿನ ಜಾಜೂರು ಗ್ರಾಮದ ಪುರಾತನ ದೇವಸ್ಥಾನಗಳಲ್ಲಿ ಒಂದಾದ ಗ್ರಾಮ ದೇವತೆ ಶ್ರೀಕರಿಯಮ್ಮ ದೇವಿಯ ಮಹಾದ್ವಾರ ನಿರ್ಮಾಣದ ಗುದ್ದಲಿಪೂಜೆ ನಡೆದಿದ್ದು, ನೂರಾರು ಭಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಜೆ.ಪಿ.ಜಯಪಾಲಯ್ಯ ಮಹಾದ್ವಾರ ನಿರ್ಮಾಣದ ಗುದ್ದಿಪೂಜೆ ನೆರವೇರಿಸಿ



ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ಕರಿಯಮ್ಮದೇವಿ ದೇವಸ್ಥಾನದ ಮುಂಭಾಗದಲ್ಲಿ ಮಹಾದ್ವಾರ ನಿರ್ಮಾಣ ಮಾಡಬೇಕೆಂಬ ಭಕ್ತರ ಬೇಡಿಕೆ ಈಗ ಈಡೇರುತ್ತಿದೆ. ಮಹಾದ್ವಾರ ನಿರ್ಮಾಣ ಕುರಿತಂತೆ ಈಗಾಗಲೇ ಹಲವುಬಾರಿ ಸಭೆ ನಡೆಸಿ ಮಹಾದ್ವಾರ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಶ್ರೀಕರಿಯಮ್ಮದೇವಿ ಈ ಭಾಗದ ಜನರ ಆರಾಧ್ಯ ದೈವ. ಹಲವಾರು ವಿಶೇಷ ಸಂದರ್ಭಗಳಲ್ಲಿ ಈ ಭಾಗದ ಜನರಿಗೆ ಯಾವುದೇ ತೊಂದರೆಯಾಗದಂತೆ ದೇವಿ ಆಶೀರ್ವಾದಿಸಿದ್ದಾಳೆ ಎಂದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಮಲ್ಲಿಕಾರ್ಜುನಪ್ಪ, ಬಿಜೆಪಿ ಮಾಜಿ ಮಂಡಲಾಧ್ಯಕ್ಷ ಸೋಮಶೇಖರಮಂಡಿಮಠ, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ರವಿಕುಮಾರ್, ಮಲ್ಲಿಕಾರ್ಜುನ್, ಮಾರುತಿ, ಬೊಮ್ಮಣ್ಣ, ಹನುಮಂತರಾಯ, ಚಿತ್ತಯ್ಯ, ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಲೋಕಸಭಾ ಚುನಾವಣೆ: ದಾವಣಗೆರೆ ಜಿಲ್ಲೆಯಲ್ಲಿ ಶಾಂತಯುತ ಮತದಾನ






» **ಮೊದಲ ಪುಟದಿಂದ**

ಅಂತಿಮ ಹಂತದ ಮತದಾನ ಪ್ರಮಾಣವನ್ನು ನಿರೀಕ್ಷಿಸಲಾಗಿದ್ದು 2019 ರ ಚುನಾವಣೆಯಲ್ಲಿ ದಾಖಲಾಗಿದ್ದ ಶೇ 72.96 ರಷ್ಟು ಮತದಾನ ಪ್ರಮಾಣದ ದಾಖಲೆಯನ್ನು ಹಿಂದಿಕ್ಕಿ ಗಣನೀಯ ಮತಪ್ರಮಾಣ ಏರಿಕೆಯಾಗಲಿದೆ ಎಂದು ಆಶಿಸಲಾಗಿದೆ.

ಚುನಾವಣಾ ಪ್ರಕ್ರಿಯೆಯಲ್ಲಿ ಕಳೆದ ಮೂರು, ನಾಲ್ಕು ತಿಂಗಳುಗಳಿಂದ ತಂಡಗಳು ನಿರಂತರ ಕೆಲಸ ಮಾಡುತ್ತಾ ಬರಲಾಯಿತು. ಪ್ರಮುಖವಾಗಿ ಮತದಾರರ ನೊಂದಣಿ, ಮತದಾರರ ಜಾಗೃತಿ ಕಾರ್ಯಕ್ರಮಗಳ ಮೂಲಕ ಮತದಾರರಿಗೆ ಮಾಹಿತಿ, ಅರಿವು ಮೂಡಿಸುವ ಕೆಲಸವನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ್ ಬಿ.ಇಟ್ನಾಳ್ ರವರು ನಿರಂತರ ಸ್ವೀಪ್ ಕಾರ್ಯಕ್ರಮಗಳ ಮೂಲಕ ಹೆಚ್ಚಿನ ಜಾಗೃತಿ ಮೂಡಿಸಿ ಮತದಾರರು ಜಾಗೃತರನ್ನಾಗಿಸಲು ಶ್ರಮಿಸಿದ್ದಾರೆ. ಮತ್ತು ಸುದೀರ್ಘವಾದ ಚುನಾವಣೆಯಲ್ಲಿ ಸಂಪೂರ್ಣ ಶಾಂತಯುತ ಚುನಾವಣೆ ನಡೆಸಲು ಕಾನೂನು ಸುವ್ಯವಸ್ಥೆ ಕಾಪಾಡಲು ಶ್ರಮಿಸಿದ ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಮತ್ತು ಪೊಲೀಸ್ ಇಲಾಖೆ, ಚುನಾವಣಾ ಕರ್ತವ್ಯದಲ್ಲಿ ನಿರತರಾಗಿದ್ದ ಸಹಾಯಕ ಚುನಾವಣಾಧಿಕಾರಿಗಳು, ತಹಶೀಲ್ದಾರರು, ಚುನಾವಣಾ ತಂಡಗಳಲ್ಲಿ ಕೆಲಸ ಮಾಡುವ ಮೂಲಕ ಮಾದರಿ ನೀತಿ ಸಂಹಿತೆ ಜಾರಿಗೆ ತರಲು ದಿನದ ಮೂರು ಪಾಳಿಯಲ್ಲಿ ಕೆಲಸ ಮಾಡಿದ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಕರ್ತವ್ಯವನ್ನು ಮೆಚ್ಚಲಾಗಿದೆ. ಮತದಾನ ದಿನ ಅಂದಾಜು 8996 ಮತದಾನ ಸಿಬ್ಬಂದಿಗಳು ಮತದಾನ ಪ್ರಕ್ರಿಯೆಯಲ್ಲಿ ಭಾಗಿಯಾಗಿ ಚುನಾವಣೆಯನ್ನು ಯಶಸ್ವಿಯಾಗುವಂತೆ ಮಾಡಿದ್ದಾರೆ. ಚುನಾವಣಾ ಆಯೋಗದ ನಿಯಮಗಳನ್ನು ಚಾಚು ತಪ್ಪದೇ ಪಾಲನೆ ಮಾಡುವ ಮೂಲಕ ಮತದಾನದಲ್ಲಿ ಭಾಗಿಯಾದ ಮತದಾರರು ಹಾಗೂ ದಾವಣಗೆರೆ ಜಿಲ್ಲೆಯ ನಾಗರಿಕರ ಸಹಕಾರ ಬಹಳ ದೊಡ್ಡದಾಗಿದ್ದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಮನ್ನಣೆ ನೀಡಿದ ಜನತೆಗೆ ಅಭಿನಂದನೆಗಳನ್ನು ತಿಳಿಸಲಾಗಿದೆ.

ಮತ ಎಣಿಕೆ ಜೂನ್ 4; ಲೋಕಸಭಾ ಮತದಾನ ಎಣಿಕೆಯು ಜೂನ್ 4 ರಂದು ಬೆಳಗ್ಗೆ 8 ರಿಂದ ತೋಳಹುಣಸೆ ದಾವಣಗೆರೆ ವಿಶ್ವವಿದ್ಯಾನಿಲಯ ಶಿವಗಂಗೋತ್ರಿಯಲ್ಲಿ ನಡೆಯಲಿದ್ದು ಅಲ್ಲಿಯವರೆಗೆ ಲೋಕಸಭಾ ಕ್ಷೇತ್ರದ 30 ಅಭ್ಯರ್ಥಿಗಳ ಭವಿಷ್ಯ ಸ್ಟ್ರಾಂಗ್ ರೂಂನಲ್ಲಿ ಭದ್ರವಾಗಿರಲಿದ್ದು ಮತ ಎಣಿಕೆ ಪ್ರತಿ ಕ್ಷೇತ್ರದಲ್ಲಿ ಒಟ್ಟು 14 ಟೇಬಲ್‌ಗಳಲ್ಲಿ ನಡೆಯಲಿದೆ.

# ಮಕ್ಕಳಿಗೆ ನೀಡುವ ಲಸಿಕೆಗಳು ಎದೆ ಹಾಲಿನಷ್ಟೇ ಮಹತ್ವವಾಗಿದೆ: ಟಿಎಚ್ಓ ಡಾ.ಬಿ.ವಿ.ಗಿರೀಶ್

» **ಚಿತ್ರದುರ್ಗ**

ಮಕ್ಕಳಿಗೆ ನೀಡುವ ಲಸಿಕೆಗಳು ಎದೆ ಹಾಲಿನಷ್ಟೇ ಮಹತ್ವವಾಗಿದೆ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ. ಗಿರೀಶ್ ತಿಳಿಸಿದರು.

ಇಲ್ಲಿನ ಗೋಪಾಲಪುರ ರಸ್ತೆಯ ರಾಮ್‌ದಾಸ್ ಕಾಂಪೌಂಡ್‌ನ ಅಂಗನವಾಡಿ ಕೇಂದ್ರದಲ್ಲಿ ಮಂಗಳವಾರ ಲಸಿಕಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳಿಗೆಕಾಲಕಾಲಕ್ಕೆಲಸಿಕೆಹಾಕಿಸುವುದು ಪೋಷಕರ ಜವಾಬ್ದಾರಿಯಾಗಿದೆ. ಪ್ರತಿ ವಾರ್ಡ್‌ನಲ್ಲಿಯೂ ಸಹ ಸಂಬಂಧಿಸಿದ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಲಸಿಕಾ ಸತ್ರವನ್ನು ಪ್ರತಿ ಗುರುವಾರ ಮತ್ತು ಮಂಗಳವಾರ ನಡೆಸುತ್ತಾರೆ. ತಂದೆ-ತಾಯಂದಿರಿಗೆ, ಪೋಷಕರಿಗೆ, ಆಶಾ ಕಾರ್ಯಕರ್ತೆಯರು ಲಸಿಕಾ ದಿನಾಂಕವನ್ನು ಮುಂಚಿತವಾಗಿಯೇ ತಿಳಿಸಿರುತ್ತಾರೆ. ಲಸಿಕಾ ಕೇಂದ್ರಗಳಿಗೆ ತಪ್ಪದೇ ಮಕ್ಕಳನ್ನು ಕರೆ ತನ್ನಿ. ಮಕ್ಕಳಿಗೆ



ನೀಡುವ ಲಸಿಕೆಗಳು ಎದೆ ಹಾಲಿನಷ್ಟೇ ಮಹತ್ವವಾಗಿದೆ ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಅವರು ಲಸಿಕಾ ಅಧಿವೇಶನದ ಪೂರ್ವ ಸಿದ್ಧತಾ ಮಾನದಂಡಗಳನ್ನು ಪರಿಶೀಲಿಸಿ ಮಾತನಾಡಿ, ತಾಯಂದಿರು ತಮ್ಮ ಮಕ್ಕಳನ್ನು 2 ವರ್ಷದಲ್ಲಿ 7 ಬಾರಿ ಲಸಿಕಾ ಕೇಂದ್ರಕ್ಕೆ ಕರೆ ತನ್ನಿ. 12 ಮಾರಕ ರೋಗಗಳ ವಿರುದ್ಧ ನಿಮ್ಮ ಮಕ್ಕಳಿಗೆ ಲಸಿಕೆ ಕೊಡಿಸಿ ಜವಾಬ್ದಾರಿ ತೋರಿ ಮಕ್ಕಳ ಮರಣ ತಪ್ಪಿಸಿ ಎಂದರು.ಬೇಸಿಗೆಯಲ್ಲಿ ನಿರ್ಜಲೀಕರಣ ಆಗದಂತೆ ತಾಯಿ ಮಕ್ಕಳು ಆರೋಗ್ಯ ಹೇಗೆ ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ ಮಾತನಾಡಿ, ಈ ಹಿಂದಿನ ಹೆರಿಗೆ ಸಿಜೇರಿಯನ್ ಹೆರಿಗೆಯಾಗಿದ್ದರೆ ಜನನದ ನಡುವೆ ಅಂತರ ಕನಿಷ್ಠ 4 ರಿಂದ 5 ವರ್ಷವಾದರೂ ಅಂತರವಿರಲಿ ಇದಕ್ಕಾಗಿ ಕುಟುಂಬ ಯೋಜನೆ ಅನುಸರಿಸಿ ಆರೋಗ್ಯ ಕಾಪಾಡಿಕೊಳ್ಳಿ ಎಂದು ತಿಳಿಸಿದ ಅವರು, ಮಕ್ಕಳಿಗೆ ನೀಡುವ ಪೂರಕ ಪೌಷ್ಟಿಕ ಆಹಾರ ತಯಾರಿಸುವ ಬಗ್ಗೆ ತಾಯಂದಿರಿಗೆ ಮಾರ್ಗದರ್ಶನ ನೀಡಿದರು.

ತಾಲ್ಲೂಕು ಆರೋಗ್ಯ ಸುರಕ್ಷತಾಧಿಕಾರಿ ಕಾತ್ಯಾಯಣಮ್ಮ ಮಾತನಾಡಿ, ಲಸಿಕಾ ಸಂದೇಶಗಳು, ಲಸಿಕಾ ವೇಳಾಪಟ್ಟಿ ಯಾವ ಯಾವ ಲಸಿಕೆಗಳನ್ನು ಮಕ್ಕಳಿಗೆ ಯಾವ ಯಾವಾಗ ಕೊಡಿಸಬೇಕು ಎಂಬುದರ ಬಗ್ಗೆ ತಿಳಿಸಿ ಲಸಿಕಾ ಫಲಾನುಭವಿಗಳ ಪಟ್ಟಿ ಪರಿಶೀಲಿಸಿದರು.

ಕಾರ್ಯಕ್ರಮದಲ್ಲಿ 13 ಮಕ್ಕಳಿಗೆ ವಿವಿಧ ಹಂತಗಳ ಲಸಿಕೆ ನೀಡಿದರು. 2 ಗರ್ಭಿಣಿಯರಿಗೆ ಲಸಿಕೆಯೊಂದಿಗೆ ತಾಯಿಕಾರ್ಡ್ ನೀಡಿದರು.

ಕಾರ್ಯಕ್ರಮದಲ್ಲಿ ನಗರ ಆರೋಗ್ಯ ಕೇಂದ್ರದ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ರೂಪ, ಆಶಾ ಕಾರ್ಯಕರ್ತೆ ಮಂಜುಳ, ನೇತ್ರಾವತಿ, ಅಂಗನವಾಡಿ ಕಾರ್ಯಕರ್ತೆ ನಸೀಮಾ ಬಾನು ತಾಯಂದಿರು ಮಕ್ಕಳು ಉಪಸ್ಥಿತರಿದ್ದರು.

## ವಿವಿಧ ಬೇಡಿಕೆ ಈಡೇರಿಸುವಂತೆ ಡಿಸಿ ಕಚೇರಿ ಎದುರು ಅಖಂಡ ಕರ್ನಾಟಕ ರಾಜ್ಯ ರೈತ ಸಂಘದ ಪ್ರತಿಭಟನೆ



» **ಚಿತ್ರದುರ್ಗ**

ಚಳ್ಳಕೆರೆ ತಾಲ್ಲೂಕಿನ ಸಿದ್ದೇಶ್ವರನದುರ್ಗ, ಸೋಮಗುದ್ದು ಗ್ರಾಮ ಪಂಚಾಯಿತಿಗಳಿಗೆ ಸೇರಿದ ಹಳ್ಳಿಗಳ ಬೆಳೆ ವಿಮೆಯನ್ನು ಪುನಃ ಪರಿಶೀಲಿಸಿ ಎಲ್ಲಾ ರೈತರ ಬ್ಯಾಂಕ್ ಖಾತೆಗಳಿಗೆ ವಿಮೆ ಹಣ ಪಾವತಿಸಿ ಬರ ಪರಿಹಾರ ತುರ್ತಾಗಿ ನೀಡಬೇಕೆಂದು ಅಖಂಡ ಕರ್ನಾಟಕ ರಾಜ್ಯ ರೈತ ಸಂಘ ಚಳ್ಳಕೆರೆ ತಾಲ್ಲೂಕು ಶಾಖೆಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಯಿತು.

ಬೆಳೆ ಸಮೀಕ್ಷೆಯಲ್ಲಿ ಅಧಿಕಾರಿಗಳು ತಾರತಮ್ಯವೆಸಗಿರುವುದರಿಂದ ರೈತರು ತೊಂದರೆ ಅನುಭವಿಸುತ್ತಿದ್ದಾರೆ. ಬ್ಯಾಂಕ್ ಅಧಿಕಾರಿಗಳು ಇನ್ಸುರೆನ್ಸ್ ಹಣವನ್ನು ಪಿ.ಎಂ.ಕಿಸಾನ್, ಎಸ್.ಎಸ್.ವೈ. ಹಣವನ್ನು ಬ್ಯಾಂಕ್ ಸಾಲಕ್ಕೆ ಜಮ ಮಾಡಿರುವುದನ್ನು ರದ್ದುಪಡಿಸಿ ರೈತರಿಗೆ ಹಣ ಪಾವತಿ ಮಾಡಬೇಕು. ಸೂರನಹಳ್ಳಿ ಮಾರ್ಗದಿಂದ ಮರಿಕುಂಟೆ ಮಾರ್ಗವಾಗಿ ಸರ್ಕಾರಿ ಬಸ್ ಸಂಚಾರ ಆರಂಭಿಸುವಂತೆ ಚಳುವಳಿ ನಡೆಸಿದ್ದರೂ ಇದುವರೆವಿಗೂ ಬಸ್ ವ್ಯವಸ್ಥೆಯಿಲ್ಲ. ಪರಶುರಾಂಪುರ ಹೋಬಳಿ ಚೌಳೂರು ಗ್ರಾಮದ ರಿ.ಸ.ನಂ. 152 ರಲ್ಲಿ 1989-90 ನೇ ಸಾಲಿನಲ್ಲಿ ಸಾಗುವಳಿ ನೀಡಿದ್ದು, ಇದುವರೆವಿಗೂ ದುರಸ್ತಿ ಕಾಣದೆ ಹದ್ದುಬಸ್ತ್ ಆಗಿರುವುದಿಲ್ಲ. ಬಿತ್ತನೆ ಸಮಯದಲ್ಲಿ ಹಲವು ರೈತರು ಗಲಾಟೆ ಮಾಡಿಕೊಂಡು ಕೋರ್ಟ್‌ಗೆ ಅಲೆದಾಡುತ್ತಿದ್ದಾರೆ. ತುರ್ತಾಗಿ ದುರಸ್ಥಿಗೊಳಿಸುವಂತೆ ಪ್ರತಿಭಟನಾನಿರತ ರೈತರು ಒತ್ತಾಯಿಸಿದರು.

ರೈತ ಮುಖಂಡರುಗಳಾದ ಚಿಕ್ಕಣ್ಣ, ಜಂಪಣ್ಣ, ಖಾದರ್‌ಭಾಷ, ನವೀನ್‌ಗೌಡ, ರುದ್ರಣ್ಣ, ಜಯಮ್ಮ, ತಿಮ್ಮಣ್ಣ, ಎಂ.ಲಕ್ಷ್ಮಿದೇವಿ, ಪರಮೇಶ್ವರಪ್ಪ, ಕರ್ನಾಟಕ ರಾಜ್ಯ ರೈತ ಸಂಘದ ಹಿರಿಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ ಇನ್ನು ಮುಂತಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ನಗರಸಭೆಯಿಂದ ವಿವಿಧ ಮದ್ಯದಂಗಡಿಗಳ ಮೇಲೆ ದಾಳಿ ನಿಷೇಧಿತ ಪ್ಲಾಸ್ಟಿಕ್ ಲೋಟಗಳ ವಶ



» **ಚಿತ್ರದುರ್ಗ**

ನಗರದ ಅನೇಕ ಬಾರ್‌ಗಳ ಮೇಲೆ ನಗರಸಭೆಯವರು ದಾಳಿ ನಡೆಸಿ ಪ್ಲಾಸ್ಟಿಕ್ ಕಪ್‌ಗಳನ್ನು ವಶಪಡಿಸಿಕೊಂಡು ದಂಡ ವಿಧಿಸಿದ್ದಾರೆ. ಐಸಿರಿ, ಸಮೃದ್ಧಿ, ಚಳ್ಳಕೆರೆ ಟೋಲ್‌ಗೇಟ್‌ನಲ್ಲಿ ರವಿ ಬಾರ್ ಅಂಡ್ ರೆಸ್ಟೋರೆಂಟ್ ಹಾಗೂ ಮಧುಲೋಕ ಬಾರ್‌ಗಳ ಮೇಲೆ ದಾಳಿ ನಡೆಸಿ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ಲೋಟಗಳನ್ನು ವಶಪಡಿಸಿಕೊಂಡು ದಂಡ ವಿಧಿಸಿ ಇನ್ನು ಮುಂದೆ ಬಳಸಿದರೆ ಪರವಾನಗಿ ರದ್ದುಗೊಳಿಸುವುದಾಗಿ ಬಾರ್ ಮಾಲೀಕರುಗಳಿಗೆ ಎಚ್ಚರಿಕೆ ನೀಡಿದರು. ನಗರಸಭೆ ಪರಿಸರ ಇಂಜಿನಿಯರ್ ಜಾಫರ್, ಹೆಲ್ತ್ ಇನ್ಸ್‌ಪೆಕ್ಟರ್‌ಗಳಾದ ಸರಳ, ಭಾರತಿ, ನಾಗರಾಜ್, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯವರು ದಾಳಿಯಲ್ಲಿ ಪಾಲ್ಗೊಂಡಿದ್ದರು.

## ಹೊಳಲ್ಕೆರೆ: ಮಳೆಗಾಗಿ ಮಲ್ಲಪ್ಪನ ಪ್ರಾರ್ಥನೆ

» **ಹೊಳಲ್ಕೆರೆ**

ಹೋಯ್ಯ ಹೋಯ್ಯ ಮಳೆರಾಯ, ಮಳೆಯ ಮಲ್ಲಪ್ಪ ಬಂದ್ವನೇ, ನೀರಾಕಿ ನೀರಾಕಿ ಹೀಗೆ ಚಿಕ್ಕ ಮಕ್ಕಳು ಕೂಗುತ್ತಿದ್ದರೇ, ಹಟ್ಟಿಯ ಮಹಿಳೆಯರು ಹಾಡುಗಳನ್ನು ಹೇಳುತ್ತಿದ್ದರು. ಇವರ ಜತೆಗೆ ಅರೆಬೆತ್ತಲೆಯ ಮಗು, ತಲೆಯ ಮೇಲೊಂದು ಹಲಗೆ, ಅದರ ಮೇಲೊಂದು ಬೆರಣಿ ಗಣಪ ಹೊತ್ತು. ಮನೆ ಮುಂದೆ ಬಂದು ನಿಂತು ಮಳೆಗಾಗಿ ಮಳೆಯ ಮಲ್ಲಪ್ಪ ಬಂದಿದ್ದಾನೆ, ಪೂಜೆ ಮಾಡಿ ಮಳೆಗಾಗಿ ಪ್ರಾರ್ಥಿಸುವಂತೆ ಜತೆಯಲ್ಲಿದ್ದ ಹಿರಿಯರು ತಿಳಿಸುತ್ತಿದ್ದ ದೃಷ್ಯಗಳು ಪಟ್ಟಣದ ಕೋಟೆ ಬೀದಿಯಲ್ಲಿ ಸೋಮವಾರ ಸಂಜೆ ಮಳೆಗಾಗಿ ಮಳೆಮಲ್ಲಪ್ಪ ಆಚರಣೆಯಲ್ಲಿ ಕಂಡು ಬಂದವು. ಇದಕ್ಕು ಮೊದಲು ಮಹಿಳೆಯರಲ್ಲ ಪಟ್ಟಣದ ಕಾಲಭೈರೇಶ್ವರ ದೇವಸ್ಥಾನದ ಕನ್ನಕ್ಕಿ ಬಾವಿಯಲ್ಲಿ ಗಂಗಾಪೂಜೆ ಸಲ್ಲಿಸಿ, ಹುಡಿ ತುಂಬಿ ಹರಿಶಿಣ ಕುಂಕುಮ ಹೂವು ಮುಡಿದು, ಗಂಗೆಯನ್ನು ತುಂಬಿದ ಕಳಸವನ್ನು ಮಕ್ಕಳ ಮೇಲೆ ಹೊರಿಸಿಕೊಂಡು ಮನೆಗಳ ಮುಂದೆ ನಿಂತು ಮಳೆ ಮಲ್ಲಪ್ಪ ಬಂದ್ವನೇ ಎಂದು ಕೇರಿ ಕೇರಿ ಸುತ್ತಿ ಪೂಜೆ ಸಲ್ಲಿಸುವಂತೆ ಹೇಳುತ್ತಿದ್ದಂತೆ ಮನೆ ಮಂದಿಯಲ್ಲ ವಿಶೇಷ ಪೂಜೆ ಸಲ್ಲಿಸಿದರು.

ನಾಡಿಗರ ಮನೆ ಮುಂದೆ ಹಾಕಿದ ರಂಗೂಲಿಯಲ್ಲಿ ಗಂಗಾ ಕಳಲವಿಟ್ಟು ಪೂಜೆ ಸಲ್ಲಿಸಿ ಮಳೆಗಾಗಿ ಪ್ರಾರ್ಥಿಸಿದರು. ಗಂಗೆ ಕಳಸದ ಚಂಬಿನ ಮೇಲೆ ಮಣೆ ಇಟ್ಟು ಮಕ್ಕಳನ್ನು ಕೂರಿಸಿ ಮಳೆಗಾಗಿ ಅಪ್ಪಣೆ ಕೇಳಿದಾಗ ಕಳಸದ ಚಂಬು ಸುತ್ತುತ್ತಿದ್ದಂತೆ ಮಳೆ ಬರುವ ಶುಭ ಸಂಧೇಶವಾಗಿದೆ. ಮಳೆ ಬರುತ್ತದೆ ಸಂತಸಗೊಂಡರು. ಮಳೆಗಾಗಿ ಮಳೆ ಮಲ್ಲಪ್ಪ ಪೂಜೆ ಮಾಡಿದ ನಂತರ ಊರಭಾಗಿಲಿನ ಕರೆಕಲ್ಲಪ್ಪ ದೇವರಿಗೆ ಪೂಜೆ ಸಲ್ಲಿಸಲಾಗಿತ್ತು. ಏಕೋ ಮಳೆ ಬರುತ್ತಿಲ್ಲ. ಮೋಡ ಕಟ್ಟಿದರೂ ಮಳೆ ಹನಿ ಸುರಿಯುತ್ತಿಲ್ಲ. ಬರೇ ಗಾಳಿ ದೂಳಿ, ಮಳೆರಾಯ ಮುನಿಸಿಕೊಂಡಾನೆ. ಮಳೆ ಮಲ್ಲಪ್ಪನೇ ಮಳೆ ತರಿಸುವಂತೆ, ನಮ್ಮನ್ನು ಕಷ್ಟದಿಂದ ಪಾರು ಮಾಡು, ಮಳೆ ಬೆಳೆ ಚನ್ನಾಗಿ ನಡೆಸುವಂತೆ ಸೇರಿದ್ದ ಜನರೆಲ್ಲ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಮಳೆ ಮಲ್ಲಪ್ಪ ಪೂಜೆಯಲ್ಲಿ ರೈತ ಸಂಘದ ಅಧ್ಯಕ್ಷ ಸಿದ್ದರಾಮಪ್ಪ, ಕಾರ್ಯದರ್ಶಿ ಅಜ್ಜಯ್ಯ,ರೈತರಾದ ಬಿ.ಎಸ್.ರಂಗಸ್ವಾಮಿ,ಮಲ್ಲಿಕಾರ್ಜುನ್,ಬಸಯ್ಯಸ್ವಾಮಿ, ಮಲ್ಲಿಕಾರ್ಜುನಯ್ಯ, ಕೋಟೆಯ ಮಹಿಳೆಯರು ಪಾಲ್ಗೊಂಡಿದ್ದರು.



ಹೊಳಲ್ಕೆರೆಯಲ್ಲಿ ಮಳೆಗಾಗಿ ಪ್ರಾರ್ಥಿಸಿ ಮಳೆ ಮಲ್ಲಪ್ಪ ಪೂಜೆ ಕೈಗೊಂಡ ರೈತ ಮಹಿಳೆಯರು.

**ಪ್ರಮುಖ ಸುದ್ದಿ**

### ಕ್ಯಾತಗೊಂಡನಹಳ್ಳಿ: ಅಕ್ರಮ ಮದ್ಯ ಮಾರಾಟ ತಡೆಯಲು ಜಿಲ್ಲಾಧಿಕಾರಿಗಳಿಗೆ ಅರ್ಜಿ

# ಗ್ರಾಮಕ್ಕೆ ಭೇಟಿ ನೀಡಿದ ಅಬಕಾರಿ ಇಲಾಖೆ ಅಧಿಕಾರಿಗಳು

» **ಚಳ್ಳಕೆರೆ**

ತಾಲ್ಲೂಕಿನ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಾಲುವೇಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕ್ಯಾತಗೊಂಡನಹಳ್ಳಿ ಗ್ರಾಮದಲ್ಲಿ ಮಹಿಳೆಯರು ಪ್ರತಿನಿತ್ಯ ನಮ್ಮ ಗ್ರಾಮದ ಎಲ್ಲಾ ಅಂಗಡಿಗಳಲ್ಲಿ ಹಗಲುರಾತ್ರಿ ಎನ್ನದೆ ಅಕ್ರಮ ಮದ್ಯ ಮಾರಾಟ ಮಾಡುತ್ತಿದ್ದು, ಕೂಡಲೇ ನಿಯಂತ್ರಿಸಬೇಕೆಂದು ಜಿಲ್ಲಾಧಿಕಾರಿಗಳಿಗೆ ಲಿಖಿತ ಮೂಲಕ ಮನವಿ ನೀಡಿ ಒತ್ತಾಯಿಸಿದ್ದರು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕ್ಯಾತಗೊಂಡನಹಳ್ಳಿ ಗ್ರಾಮದ ಮಹಿಳೆಯರ ನೆಮ್ಮದಿಗೆ ಸಂಚಕಾರ ತಂದಿರುವ ಅಕ್ರಮದ್ಯ ಮಾರಾಟ ತಡೆಯುವ ಕುರಿತು ಅಬಕಾರಿ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿ,ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಜಿಲ್ಲಾಧಿಕಾರಿಗಳ ಸೂಚನೆ ಮೇರೆಗೆ ಜಿಲ್ಲಾ ಅಬಕಾರಿ ಉಪ ಆಯುಕ್ತರ



ನಿರ್ದೇಶನದಂತೆ ಇಲ್ಲಿನ ಅಬಕಾರಿ ನಿರೀಕ್ಷಕ ಸಿ.ನಾಗರಾಜು ಮತ್ತು ತಂಡ ಸೋಮವಾರ, ಮಂಗಳವಾರ ಗ್ರಾಮಕ್ಕೆ ತೆರಳಿ ಅಲ್ಲಿನ ಮಹಿಳೆಯರಿಂದ ಮಾಹಿತಿ ಪಡೆದು ಗ್ರಾಮದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದ ಮೇಕೆನಾಗರಾಜ, ಪುಟ್ಟಕ್ಕ, ಕೃಷ್ಣಮೂರ್ತಿ, ಮಹೇಶ್, ಮಾರಕ್ಕ, ಡಿಂಗ್ರಿನಾಗರಾಜ, ರೆಡ್ಡಮ್ಮ ಇವರುಗಳ ಪೆಟ್ಟಿಗೆ ಅಂಗಡಿಗಳನ್ನು ಪರಿಶೀಲಿಸಿ ಅಕ್ರಮ ಮದ್ಯ ಮಾರಾಟ ಮಾಡಿದಲ್ಲಿ ಕಾನೂನು ಪ್ರಕಾರ ಕ್ರಮಕೈಗೊಳ್ಳುವ ಎಚ್ಚರಿಕೆ ನೀಡಿದರು.

ಇದೇ ಸಂದರ್ಭದಲ್ಲಿ ಸಾರ್ವಜನಿಕರೊಂದಿಗೆ ಜಾಗೃತಿ ಸಭೆ ನಡೆಸಿದ ಅಬಕಾರಿ ಇಲಾಖೆ ಅಧಿಕಾರಿಗಳು ಇನ್ನು ಮುಂದೆ ಯಾವುದೇ ಅಕ್ರಮ ಮದ್ಯ ಮಾರಾಟ ಕಂಡುಬಂದಲ್ಲಿ ಕೂಡಲೇ ಇಲಾಖೆಯ ಗಮನಕ್ಕೆ ತರುವಂತೆ ಸೂಚನೆ ನೀಡಿದರು. ಅಕ್ರಮ ಮದ್ಯ ಮಾರಾಟ ನಡೆಯುವಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳೊಂದಿಗೆ ಸಾರ್ವಜನಿಕರೂ ಸಹ ಹೆಚ್ಚು ಸಹಕಾರ ನೀಡಬೇಕೆಂದು ಅವರು ತಿಳಿಸಿದರು.

ಪರಶುರಾಮಪುರ ಪಿಎಸ್ಐ ಪ್ರಶಾಂತ್, ಉಪನಿರೀಕ್ಷಕಿ ಎಸ್.ಎಚ್.ರೇಖಾ, ಅಬಕಾರಿ ಪೇದೆಗಳಾದ ಸೋಮಶೇಖರ, ನಾಗರಾಜು ಮುಂತಾದವರು ಇದ್ದರು.

## ಫಾಸ್ಟ್ ನ್ಯೂಸ್

### ಕೈಮಗ್ಗ ತಂತ್ರಜ್ಞಾನದಲ್ಲಿ ಡಿಪ್ಲೊಮಾ ಕೋರ್ಸ್ ಪ್ರವೇಶಕ್ಕೆ ಅರ್ಜಿ

» **ಚಿತ್ರದುರ್ಗ**

2024-25ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ (ಡಿ.ಹೆಚ್.ಟಿ.ಟಿ.) ಕೋರ್ಸ್ ಕಲಿಕೆಗಾಗಿ 44 ಪುರುಷ, ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ-ಬೆಟಗೇರಿ (ಕರ್ನಾಟಕ)-22, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು)-17, ಎಸ್.ಪಿ.ಕೆ.ಎಂ ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ ಆಂದ್ರಪ್ರದೇಶ)-03 ಹಾಗೂ ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ)-02 ಅಭ್ಯರ್ಥಿಗಳು ಸೇರಿದಂತೆ ಒಟ್ಟು 44 ಅರ್ಹ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸೆಲಿಂಗ್ ಕರೆಯಲಾಗುವುದು. ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲಿಷ್‌ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. 2024 ಜುಲೈ 01 ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15 ರಿಂದ 23 ವಯೋಮಾನದಲ್ಲಿರಬೇಕು ಹಾಗೂ ಪ.ಜಾತಿ, ಪ.ಪಂಗಡ ವರ್ಗದ ಅಭ್ಯರ್ಥಿಗಳು 15 ರಿಂದ 25 ವಯೋಮಾನದವರಾಗಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೂಢೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತದೆ. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿ ಅನ್ವಯ ಪ್ರತಿ ವಿದ್ಯಾರ್ಥಿಗೆ ಮಾಸಿಕ ರೂ.2500/ ಶಿಷ್ಯವೇತನ ನೀಡಲಾಗುವುದು ಹಾಗೂ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಿಕೊಡಲಾಗುತ್ತದೆ.ಆಸಕ್ತಿ ಇರುವ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಚಿತ್ರದುರ್ಗ ನಗರದ ಬಿ.ಡಿ.ರಸ್ತೆಯಯ ಭಾಗ್ಯ ಕಾಂಪ್ಲೆಕ್ಸ್, ಕೈಮಗ್ಗ ಮತ್ತು ಜವಳಿ ಇಲಾಖೆ ಉಪನಿರ್ದೇಶಕರ ಕಚೇರಿಯ ದೂರವಾಣಿ ಸಂಖ್ಯೆ 08194-221426ಗೆ ಸಂಪರ್ಕಿಸಬಹುದು. ಅರ್ಜಿಗಳನ್ನು https://khtigadag.a.in/AdmissionForm.pdf ತಂತ್ರಾಂಶದಲ್ಲಿ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಮೇ 15 ರೊಳಗಾಗಿ ಚಿತ್ರದುರ್ಗ ಕಚೇರಿಗೆ ಅಥವಾ ಮೇ.31 ರೊಳಗೆ ಗದಗ ಜಿಲ್ಲೆಯ ನರಸಾಪುರ ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯ ಪ್ರಾಂಶುಪಾಲರಿಗೆ (ದೂರವಾಣಿ:08732-297221) (ಮೊಬೈಲ್ ನಂ: 9449162822) ನೇರವಾಗಿ ಅರ್ಜಿ ಸಲ್ಲಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜೂನ್ 19 ರಿಂದ 21 ರವರೆಗೆ 3 ದಿನಗಳ ರಾಷ್ಟ್ರೀಯ ಸಮ್ಮೇಳನ

» **ಚಿತ್ರದುರ್ಗ**

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು "sustainable Ground water Management for water Security" ವಿಷಯದ ಮೇಲೆ ಜೂನ್ 19 ರಿಂದ 21 ರವರೆಗೆ ಮೂರು ದಿನಗಳ ಕಾಲ ರಾಷ್ಟ್ರೀಯ ಸಮ್ಮೇಳನ ಆಯೋಜಿಸಲಾಗುತ್ತಿದ್ದು, ಈ ಸಮ್ಮೇಳನದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳಿಂದ ನುರಿತ ವಿಜ್ಞಾನಿಗಳು ವಿಷಯಾಧಾರಿತ ಉಪನ್ಯಾಸಗಳನ್ನು ನೀಡಲಿದ್ದಾರೆ.

ಈ ಸಮ್ಮೇಳನದಲ್ಲಿ ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಯುವ ವಿಜ್ಞಾನಿಗಳು ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಅಲ್ಲದೇ, ಈ ಸಮ್ಮೇಳನದಲ್ಲಿ ರಿಸರ್ಜ್ ಪೇಪರ್ ಮಂಡಿಸಬಹುದಾಗಿದ್ದು, ಆಯ್ಕೆಯಾದ ರಿಸರ್ಜ್ ಪೇಪರ್‌ಗಳಿಗೆ ನಗದು ಬಹುಮಾನವನ್ನು ನೀಡಲಾಗುವುದು. ಈ ಸಮ್ಮೇಳನದಲ್ಲಿ ಭಾಗವಹಿಸಲು ಜೂನ್ 10 ರೊಳಗಾಗಿ (Google form-https://forms.gle/QDXV64LDibFbHydc9) ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ವಿವರಗಳಿಗೆ ಕಾರ್ಯಕ್ರಮ ಸಂಯೋಜಕರ ಮೊಬೈಲ್ ಸಂಖ್ಯೆ 9845258894 ಮತ್ತು 9743084194 ಅಥವಾ ಅಕಾಡೆಮಿಯ ವೆಬ್‌ಸೈಟ್ www.kstacademy.inವೀಕ್ಷಿಸಬಹುದಾಗಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎ.ಎಂ.ರಮೇಶ್ ತಿಳಿಸಿದ್ದಾರೆ.

### ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಅಹ್ವಾನ

» **ಹೊಸದುರ್ಗ**

2023-2024 ನೇ ಸಾಲಿನ ಕುರುಬ ಸಮುದಾಯದ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಶೇಕಡಾ 90 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ ಕಾರ್ಯಕ್ರಮವನ್ನ ಶ್ರೀಮದ್ ಜಗದ್ಗುರು ರೇವಣ ಸಿದ್ದೇಶ್ವರ ಸಿಂಹಾಸನ ಶ್ರೀಕಾಗಿನೆಲೆ ಮಹಾ ಸಂಸ್ಥಾನ ಕನಕ ಗುರುಪೀಠ ಹೊಸದುರ್ಗ ಶಾಖಾ ಮಠದ ವತಿಯಿಂದ ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ 9036597972. 9916974936.

- ಮನಸ್ಸಿಗೆ ಏನೋ ಕಿರಿಕಿರಿಯಾಗುತ್ತಿದೆಯೇ ?
- ಒಳಗೊಳಗೆ ಹೇಳಿಕೊಳ್ಳಲಾಗದ ಅಸಹನೆ ಉಂಟಾಗುತ್ತಿದೆಯೇ ?
- ಕೌಟುಂಬಿಕ ಸಂಬಂಧಗಳಲ್ಲಿ ಸಹಿಸಲಾಗದ ಮಾನಸಿಕ ಹಿಂಸೆಯಾಗುತ್ತಿದೆಯೇ ?
- ಹೊರ ಜಗತ್ತಿನ ನಮ್ಮ ಸುತ್ತಮುತ್ತಲಿನ ಅನೇಕ ಘಟನೆಗಳು ನಮ್ಮ ಇಚ್ಛೆಗೆ ವಿರುದ್ಧವಾಗಿ ಘಟಿಸುತ್ತಿದೆಯೇ ?
- ಮಾಧ್ಯಮ, ಗೆಳೆತನ, ಸಾಮಾಜಿಕ ಜಾಲತಾಣಗಳಲ್ಲಿ ನಮ್ಮ ನಂಬಿಕೆಗೆ ವಿರೋಧ ವ್ಯಕ್ತವಾಗುತ್ತಿದೆಯೇ ?
- ಧರ್ಮ ಜಾತಿ ಭಾಷೆ ಹಣಕಾಸು ಪಕ್ಷ ಸಂಪ್ರದಾಯ ಸಿದ್ದಾಂತಗಳ ವಿಷಯದಲ್ಲಿ ಏನೋ ಒಂತರಾ ಕಸಿವಿಸಿ ಎನಿಸುವಂತೆ ಮನಸ್ಸಿಗೆ ತುಮಲವಾಗುತ್ತಿದೆಯೇ ?
- ಕೆಲವು ವಿಷಯಗಳ ಬಗ್ಗೆ ಬೇಗ ಕೋಪ ಬಂದು ಪ್ರತಿಕ್ರಿಯಿಸಿ ವಿರೋಧಿಗಳ ಸದ್ದಡಗಿಸಬೇಕು ಎಂಬ ಅಭಿಪ್ರಾಯ ಉಂಟಾಗಿ ಬಿಪಿ ಏರಿಕೆಯಾಗುತ್ತದೆಯೇ ?????????

# ಜೀವನದ ಪ್ರೀತಿಗಾಗಿ



ಈ ರೀತಿಯ ಕೆಲವು ಅಥವಾ ಎಲ್ಲವೂ ನಿಮ್ಮಲ್ಲಿ ಉಂಟಾಗುತ್ತಿದ್ದರೆ ಅದನ್ನು ನಿಯಂತ್ರಿಸಿಕೊಳ್ಳಲು ಕೆಲವು ಸಲಹೆ ರೂಪದ ಕಿವಿಮಾತುಗಳು ನಿಮಗಾಗಿ........

ನಿಮ್ಮ ಮನಸ್ಸನ್ನು ವಿಶಾಲಗೊಳಿಸಿಕೊಂಡರೆ ಖಂಡಿತವಾಗಿ ಈ ಸಮಸ್ಯೆಗಳಿಗೆ ಸಹಜ ಸ್ವಾಭಾವಿಕವಾಗಿ ಪರಿಹಾರ ಕಂಡುಕೊಳ್ಳಬಹುದು ಮತ್ತು ನೆಮ್ಮದಿಯಿಂದ ಬದುಕಿನ ಸಾರ್ಥಕತೆಯತ್ತ ಹೆಜ್ಜೆ ಹಾಕಬಹುದು....

ಹೇಗೆ ಮನಸ್ಸನ್ನು ವಿಶಾಲ ಮಾಡಿಕೊಳ್ಳುವುದು ????

**1 ನಮ್ಮ ಮೂಲ ನಿಷ್ಠೆಯನ್ನು ಪ್ರಕೃತಿಗೆ ವರ್ಗಾಯಿಸುವುದು........**

ನಮ್ಮನ್ನು ಹುಟ್ಟಿಸಿರುವ ಅಪ್ಪ ಅಮ್ಮ ನಾವು ಹುಟ್ಟಿಸುವ ಮಕ್ಕಳು ಸೇರಿ ಎಲ್ಲಾ ಸಂಬಂಧಗಳು ಒಂದು ಸಾಮಾಜಿಕ ವ್ಯವಸ್ಥೆಯೇ ಹೊರತು ಅದೇ ಅಂತಿಮವಲ್ಲ. ನಾವು ಸೃಷ್ಟಿಯ ಪ್ರತ್ಯೇಕ ಜೀವಿ. ನಮ್ಮ ಅಸ್ತಿತ್ವ ಸ್ವತಂತ್ರ. ಹುಟ್ಟಿಗೆ ಗಂಡು ಹೆಣ್ಣು ಒಂದು ಮಾರ್ಗ. ಅವರನ್ನು ವ್ಯಾವಹಾರಿಕ ಗುರುತಿಗಾಗಿ ತಂದೆ ತಾಯಿ ಮಗ ಮಗಳು ಮುಂತಾದ ಹೆಸರಿನಿಂದ ಕರೆಯಲಾಗುತ್ತದೆ. ಅದರ ಅರ್ಥ ನಾವು ಈ ಯಾವ ಸಂಬಂಧಗಳ ನಿಯಂತ್ರಣಕ್ಕೆ ಒಳಪಡಬಾರದು ಅಥವಾ ಒಳಪಡಿಸಬಾರದು. ಪರಸ್ಪರ ಪ್ರೀತಿಯ ವಿಶ್ವಾಸ ಸಹಕಾರ ಇರಬೇಕೇ ಹೊರತು ಹೆಚ್ಚಿನ ನಿರೀಕ್ಷೆ ನಿಯಂತ್ರಣ ನಮ್ಮ ದುಃಖ ಹೆಚ್ಚಿಸುತ್ತದೆ. ಅಪ್ಪ ಮಗ ಮಗಳು ನಮ್ಮ ವಿರುದ್ಧ ಅಭಿಪ್ರಾಯ ಅಥವಾ ನಡವಳಿಕೆ ಪ್ರದರ್ಶಿಸಿದರೆ ಅದನ್ನು ಸಹಜವಾಗಿ ಸ್ವೀಕರಿಸಿ ಮುಂದೆ ಹೋಗಬೇಕು. ಅವರು ನಮ್ಮವರು ನಮ್ಮ ವಿರುದ್ಧವಿದ್ದಾರೆ ಎಂದು ಕೊರಗುತ್ತಾ ಇರಬಾರದು. ನಾವು ಇರುವುದು ನಮಗಾಗಿ ಮಾತ್ರ....

**2 ಹುಟ್ಟಿದ ತಕ್ಷಣ ನಮ್ಮ ಮೇಲೆ ನಮ್ಮ ಧರ್ಮ ಜಾತಿ ಭಾಷೆ ವಂಶ ಎಲ್ಲವೂ ಹೇರಲ್ಪಡುತ್ತದೆ. ಇದು ಸ್ವಾಭಾವಿಕವಲ್ಲ............**

ಸಮಾಜ ಮತ್ತು ಆಡಳಿತದ ಅನುಕೂಲಕ್ಕಾಗಿ ರೂಪಿತವಾದ ನೀತಿ ನಿಯಮಗಳು. ಇವುಗಳ ಅರಿವು ಇರಬೇಕು. ಆದರೆ ಅದೇ ಶ್ರೇಷ್ಠ ಅದೇ ಅಂತಿಮ ಅದನ್ನು ಉಳಿಸುವುದೇ ನಮ್ಮ ಕರ್ತವ್ಯ ಮುಂತಾದ ಭ್ರಮೆಗೆ ಒಳಗಾಗಬಾರದು. ಅದೊಂದು ಅವಶ್ಯ ಮತ್ತು ಅನಿವಾರ್ಯ ಅಂಶಗಳೇ ಹೊರತು ನಾವು ಅಲ್ಲಿ ಹುಟ್ಟಿದ ಮಾತ್ರಕ್ಕೆ ಅವೆಲ್ಲವೂ ಶ್ರೇಷ್ಠ ಎಂದು ಭಾವಿಸಬಾರದು. ಆಗ ಇದರಿಂದ ಇತರರು ನಮ್ಮಂತೆ ಎಂಬ ಸಹಕಾರ ಭಾವ ಮೂಡುತ್ತದೆ. ದ್ವೇಷದ ಭಾವ ಕಡಿಮೆಯಾಗುತ್ತದೆ.

**3 ಇದು ಅತಿಮುಖ್ಯವಾದುದು.**

ನಾವು ನಮ್ಮ ಅರಿವಿನ – ಜ್ಞಾನದ – ತಿಳಿವಳಿಕೆಯ ಮೂಲವನ್ನು ಸ್ಪಷ್ಟವಾಗಿ ಮತ್ತು ವೈಯಕ್ತಿಕವಾಗಿ ಗುರುತಿಸಬೇಕು...... ಅಂದರೆ ನಮ್ಮ ತಿಳಿವಳಿಕೆಯ ಮೇಲೆ ಹೆಚ್ಚು ಪ್ರಭಾವ ಬೀರಿರುವುದು ಯಾವುದು ಎಂದು ಗಮನಿಸಬೇಕು. ತಂದೆ ತಾಯಿ ತಾತಾ ಅಜ್ಜಿ ಮಾವ ದೊಡ್ಡಪ್ಪ ಅಣ್ಣ ಅಕ್ಕ ಮುಂತಾದ ಸಂಬಂದಗಳೇ, ಅಥವಾ ಶಾಲೆ ಮತ್ತು ಅಲ್ಲಿನ ಉಪಾಧ್ಯಾಯರು ಅವರಲ್ಲಿ ಒಬ್ಬರು ಅಥವಾ ಎಲ್ಲರೂ ಆಗಿರಬಹುದು ಅಥವಾ ಬೀದಿಯ – ಊರಿನ ಆಕರ್ಷಕ ವ್ಯಕ್ತಿತ್ವದ ನಾಯಕ ಯಾರಾದರೂ ಆಗಿರಬಹುದು ಅಥವಾ ಪೌರಾಣಿಕದ, ಇತಿಹಾಸದ, ವರ್ತಮಾನದ ರಾಜಕೀಯ ಸಾಮಾಜಿಕ ಧಾರ್ಮಿಕ, ಸಿನಿಮಾ, ಸಾಹಿತ್ಯ, ಸಂಗೀತ ಅಥವಾ ಇತರೆ ಯಾರಾದರೂ ಆಗಿರಬಹುದು ಅಥವಾ ನೀವು ಹುಟ್ಟಿದ, ಓದಿದ ಯಾವುದಾದರೂ ಧರ್ಮ ಅಥವಾ ಧರ್ಮ ಗ್ರಂಥಗಳಾಗಿರಬಹುದು ಅಥವಾ ಬುದ್ಧ ಬಸವ ವಿವೇಕಾನಂದ ಆಚಾರತ್ರಯರು, ಗಾಂಧಿ, ಅಂಬೇಡ್ಕರ್ ರೀತಿಯ ಯಾರಾದರೂ ಆಗಿರಬಹುದು ಅಥವಾ ನೀವು ಬೆಳೆದ ಅಥವಾ ನೋಡಿದ ಪರಿಸರವೇ ಆಗಿರಬಹುದು. ಇದರಲ್ಲಿ ಒಂದು ಅಥವಾ ಎಲ್ಲವೂ ಆಗಿರಬಹುದು. ಇದನ್ನು ನಾವು ಮನನ ಮಾಡಿಕೊಂಡರೆ ನಮಗೆ ಯೋಚಿಸುವ ದಿಕ್ಕು ಸುಲಭವಾಗಿ ಸಿಗುತ್ತದೆ. ಹೇಗೆಂದರೆ ನಾವು ಯೋಚಿಸುವುದು ಒಂದು ಮೂಲವಾದರೆ ಅದರ ಇನ್ನಷ್ಟು ಮೂಲಗಳು ಇವೆ ಎಂದು ಅರ್ಥಮಾಡಿಕೊಳ್ಳಬಹುದು. ಇದರಿಂದಾಗಿ ಮನಸ್ಸನ್ನು ವಿಶಾಲ ಗೊಳಿಸಿಕೊಳ್ಳಲು ತುಂಬಾ ತುಂಬಾ ಸಹಾಯವಾಗುತ್ತದೆ....

**4 ಈ ಎಲ್ಲದರ ನಡುವೆ ವ್ಯಾವಹಾರಿಕ ಜಗತ್ತಿನ ಅನಿವಾರ್ಯತೆಯನ್ನು ಮರೆಯಬಾರದು...........**

ಅದು ಸರಿಯಾಗಿ ಇಲ್ಲದಿದ್ದರೆ ಮೇಲೆ ಹೇಳಿದ ವಿಷಯಗಳು ವಾಸ್ತವದಲ್ಲಿ ವಿಫಲವಾಗುವ ಸಾಧ್ಯತೆಯೇ ಹೆಚ್ಚು. ಬದಲಾವಣೆಗಳನ್ನು ಸ್ವೀಕರಿಸುತ್ತಾ, ನಮ್ಮ ಅನುಕೂಲಕ್ಕೆ ತಕ್ಕಂತೆ ಅದನ್ನು ಹೊಂದಿಸಿಕೊಳ್ಳುತ್ತಾ ಅದರಲ್ಲಿ ನಿರಂತರತೆಯನ್ನು ಕಾಪಾಡಬೇಕು. ಮುಖ್ಯವಾಗಿ ಪಾಸ್ಟ್ ಫುಡ್ ಸಂಸ್ಕೃತಿಯನ್ನು ಆದಷ್ಟೂ ತಿರಸ್ಕರಿಸಬೇಕು. ಇಂದಿನ ನಮ್ಮ ಬಹುತೇಕ ಅಸಹನೆ ಅತೃಪ್ತಿಗೆ ಇದೇ ಬಹುಮುಖ್ಯ ಕಾರಣವಾಗಿದೆ. ಒಮ್ಮೆ ಇದನ್ನು ನಿಯಂತ್ರಿಸಿ ಸಾಧ್ಯವಾದಷ್ಟು ತಾಳ್ಮೆಗೆ ಶರಣಾದರೆ ಮನಸ್ಸು ನಿರ್ಮಲತೆಯತ್ತ ಸಾಗುತ್ತದೆ. ಆಗ ಸಹಜವಾಗಿ ಒತ್ತಡ ಕಡಿಮೆಯಾಗಿ ಮನಸ್ಸು ವಿಶಾಲವಾಗುತ್ತದೆ.

**5 ಈ ಎಲ್ಲವನ್ನೂ ಸಾಧ್ಯವಾಗಿಸಲು ನಿಮ್ಮ ದೈಹಿಕ ಆರೋಗ್ಯ ಬಹುಮುಖ್ಯ........**

ಅದಿಲ್ಲದೇ ಯಾವುದನ್ನೂ ನಿರೀಕ್ಷಿಸಲು ಸಾಧ್ಯವಿಲ್ಲ. ಅದನ್ನು ನಮ್ಮ ನಮ್ಮ ಅವಕಾಶ ಮತ್ತು ಮಿತಿಯಲ್ಲಿ ಕಡ್ಡಾಯವಾಗಿ ಸೈನಿಕ ಶಿಸ್ತು ರೂಪಿಸಿಕೊಳ್ಳಲು ಪ್ರಯತ್ನಿಸಲೇಬೇಕು. ಏಕೆಂದರೆ ಬಹುತೇಕ ದುರ್ಬಲ ಆರೋಗ್ಯದ ಜನರು ಹೆಚ್ಚು ಉದ್ವೇಗ ಮತ್ತು ನಿರಾಸೆಗೆ ಒಳಗಾಗುತ್ತಾರೆ. ಮನಸ್ಸಿನ ನಿಯಂತ್ರಣ ಕಳೆದುಕೊಂಡು ಇತರರನ್ನು ದೂಷಿಸುತ್ತಾರೆ. ಮನಸ್ಸಿನ ವಿಶಾಲತೆಗೆ ಇದು ಅಡ್ಡಿಯಾಗಬಹುದು.... ಕೊನೆಯದಾಗಿ,ಇದಷ್ಟೇ ಅಲ್ಲದೆ ಇನ್ನೂ ನಿಮ್ಮ ಒಳ ಮನಸ್ಸಿಗೆ ಹೊಳೆಯುವ ಯಾವುದಾದರೂ ವಿಷಯವಾಗಿರಬಹುದು. ಅದನ್ನು ಉಪಯೋಗಿಸಿಕೊಂಡು ನಿಮ್ಮ ಮನಸ್ಸುಗಳನ್ನು ವಿಶಾಲಗೊಳಿಸಿಕೊಳ್ಳಿ. ಖಂಡಿತವಾಗಿಯೂ ನಿಮ್ಮ ಜೀವನಮಟ್ಟ ತನ್ನಿಂದ ತಾನೇ ಈಗಿರುವ ಸ್ಥಾನಕ್ಕಿಂತ ಉತ್ತಮ ಮಟ್ಟಕ್ಕೆ ಏರುತ್ತದೆ. ಆ ಪ್ರಜ್ಞೆಯೇ ಒಂದು ಅದ್ಭುತ ಮಾನವ ಪ್ರೇಮದ ಸಂಕೇತ. ಸಮಾಜ ಪ್ರೀತಿಯ, ಜೀವನೋತ್ಸಾಹದ, ದೇಶ ಭಕ್ತಿಯ ಅನುಸಂಧಾನ,

ಸಾಧ್ಯವಾದರೆ ಪ್ರಯತ್ನಿಸಿ......... ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

# ಕರ್ನಾಟಕದಲ್ಲಿ ಕೆಲವು ಭಾಗಗಳಲ್ಲಿ ಭಾರಿ ಮಳೆ ಸಾಧ್ಯತೆ

» **ಬೆಂಗಳೂರು**

ಕರ್ನಾಟಕದ ಕೆಲವು ಭಾಗಗಳಲ್ಲಿ ಕಳೆದ ಕೆಲವು ದಿನಗಳಿಂದ ಮಳೆಯಾಗುತ್ತಿದ್ದು, ಮುಂಗಾರು ಪ್ರಾರಂಭವಾಗುವ ಸುಳಿವು ನೀಡಿದೆ. ಹೀಗಾಗಿ, ಭಾರಿ ಮಳೆ ಹಾಗೂ ಮಳೆ ಸಂಬಂಧಿತ ಹಾನಿಯನ್ನು ಎದುರಿಸಲು ಸಿದ್ಧತೆ ಮಾಡಿಕೊಳ್ಳುವಂತೆ ಪ್ರಾದೇಶಿಕ ಆಯುಕ್ತರು, ಡಿಸಿಗಳು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಕಂದಾಯ ಇಲಾಖೆ ಪತ್ರ ಬರೆದಿದೆ. ತಗ್ಗು ಪ್ರದೇಶಗಳನ್ನು ಗುರುತಿಸಲು, ಸಂಬಂಧಿಸಿದ ಇಲಾಖೆಗಳೊಂದಿಗೆ ಸಮನ್ವಯ ಸಭೆಗಳನ್ನು ನಡೆಸಲು ಮತ್ತು ಅಣೆಕಟ್ಟುಗಳ ಸಮೀಪವಿರುವ ನಿವಾಸಿಗಳನ್ನು ತ್ವರಿತವಾಗಿ ಎಚ್ಚರಿಸಲು ಸಿದ್ಧತೆಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ.
ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ, ಈ ವರ್ಷ ದೇಶಾದ್ಯಂತ ಶೇ 104 ರಷ್ಟು ಮಳೆಯಾಗುವ ನಿರೀಕ್ಷೆಯಿದೆ. ಕರ್ನಾಟಕದಲ್ಲಿಯೂ ಹೆಚ್ಚಿನ ಮಳೆಯಾಗಲಿದೆ. ಹೀಗಾಗಿ ಭಾರಿ ಮಳೆಯ ಹಿನ್ನೆಲೆಯಲ್ಲಿ ಯಾವುದೇ ಅನಾಹುತ ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕಿದೆ ಎಂದು ಕಂದಾಯ ಇಲಾಖೆಯ ಅಧೀನದಲ್ಲಿರುವ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಹೊರಡಿಸಿದ ಸುತ್ತೋಲೆಯಲ್ಲಿ ಉಲ್ಲೇಖಿಸಲಾಗಿದೆ.
ಯಾವುದೇ ಪರಿಸ್ಥಿತಿಯನ್ನು ಎದುರಿಸಲು ಸಿದ್ಧತೆಗಾಗಿ ಇತರ ಇಲಾಖೆಗಳೊಂದಿಗೆ ಸಭೆ ನಡೆಸಿ ಜವಾಬ್ದಾರಿಗಳನ್ನು ಹಂಚುವ ಅಗತ್ಯವೂ ಇದೆ. ತಗ್ಗು ಪ್ರದೇಶಗಳನ್ನು ಗುರುತಿಸಲು ಅಧಿಕಾರಿಗಳು ಡಿಸಿಗಳಿಗೆ ಸೂಚನೆ ನೀಡಿದ್ದು, ಇದಕ್ಕಾಗಿ ನಗರಾಭಿವೃದ್ಧಿ ಇಲಾಖೆ/ಆರ್‌ಡಿಪಿಆರ್ ಮತ್ತು ಪಿಡಬ್ಲ್ಯೂಡಿಯೊಂದಿಗೆ ಸಮನ್ವಯತೆ ಸಾಧಿಸುವ ಅಗತ್ಯವಿದೆ.ಮಳೆಯಿಂದ ಹಾನಿಗೀಡಾದ ಬೆಳೆಗಳಿಗೆ ಸರ್ಕಾರ ವಿಶೇಷ ಪ್ಯಾಕೇಜ್ ಘೋಷಿಸಬೇಕು ಹಾಗೂ ದನಕರುಗಳಿಗೆ ಆಹಾರಕ್ಕಾಗಿ ಗೋಶಾಲೆ ಆರಂಭಿಸಬೇಕು ಎಂದು ಒತ್ತಾಯಿಸಿ ರೈತ ಸಂಘದ ಕಾರ್ಯಕರ್ತರು ಮೈಸೂರು–ಊಟಿ ರಸ್ತೆ ತಡೆದು ಪ್ರತಿಭಟನೆ ನಡೆಸಿದರು. ರೈತರು ಬಾಳೆ ಮತ್ತಿತರ ತೋಟಗಾರಿಕಾ ಬೆಳೆಗಳನ್ನು ಕಳೆದುಕೊಂಡಿದ್ದು, ರೈತರನ್ನು ಅಪಾರ ನಷ್ಟದಿಂದ ಪಾರು ಮಾಡಲು ಸರ್ಕಾರ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಪ್ರತಿಭಟನಾ ನಿರತ ರೈತರು ಒತ್ತಾಯಿಸಿದರು.
ಮೈಸೂರು ತಾಲೂಕಿನ ಕತ್ತೂರು ಹಾಗೂ ಇತರೆಡೆ ಗಾಳಿ ಮಳೆಯಿಂದಾಗಿ ನೂರಾರು ಎಕರೆ ಬಾಳೆ ತೋಟಗಳು ನಾಶವಾಗಿದ್ದವು. ನೆರೆಯ ಚಾಮರಾಜನಗರದಲ್ಲಿಯೂ 1,250 ಎಕರೆ ಪ್ರದೇಶದ ಬಾಳೆ ತೋಟ ನಾಶವಾಗಿತ್ತು. ಕಾಫಿನಾಡು ಚಿಕ್ಕಮಗಳೂರಿನಲ್ಲಿ ಮಂಗಳವಾರ ಮಧ್ಯಾಹ್ನ ಧಾರಾಕಾರ ಮಳೆ ಸುರಿದಿದೆ. ಭಾರಿ ಗುಡುಗು ಮಿಂಚು ಸಹಿತ ಗಾಳಿಯೊಂದಿಗೆ ಸುಮಾರು ಅರ್ಧ ಗಂಟೆ ಮಳೆ ಸುರಿದಿದೆ.

# ಸ್ವಯಂ ಪ್ರೇರಿತ ರಕ್ತದಾನ ಶಿಬಿರ

▪ **ಚಿತ್ರದುರ್ಗ**

ವೀರಶೈವ ಸಮಾಜ ಚಿತ್ರದುರ್ಗ ಹಾಗೂ ಪ್ರಥಮ್ ಶಿಕ್ಷಣ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸಹಯೋಗದೊಂದಿಗೆ ವಿಶ್ವಗುರು ಬಸವೇಶ್ವರರ ಜಯಂತಿ ಅಂಗವಾಗಿ ಮೇ 10 ರಂದು ಬೆಳಗ್ಗೆ 9 ಗಂಟೆಗೆ ನೀಲಕಂಠೇಶ್ವರ ಸಮುದಾಯ ಭವನದಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿದೆ. ಸ್ವಯಂ ಪ್ರೇರಿತ ರಕ್ತದಾನ ಶಿಬಿರವು ಬೆಳಿಗ್ಗೆ 9 ಗಂಟೆಯಿಂದ 12:30ರವರೆಗೆ ನಡೆಯಲಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T